MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 291 | ಶುಕ್ರವಾರ :05-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 291 | FRIDAY : 05-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಎನ್‌ಐಎ ತನಿಖೆಗೆ ಚರ್ಚೆ



**ನವದೆಹಲಿ,ಸೆ.4–**ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳ ಪ್ರಕರಣವನ್ನು ಕೇಂದ್ರ ಸರ್ಕಾರ ಸೂಕ್ಷ್ಮವಾಗಿ ಗಮನಿಸಿದೆ. ಈ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಬೇಕು ಎಂಬ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು.

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿಟ್ಟಿರುವ ಬಗ್ಗೆ ಆರೋಪಿ ಚಿನ್ನಯ್ಯ ನಾನು ಪಾತ್ರಧಾರಿ ಸೂತ್ರಧಾರಿಗಳು ಬೇರೆಯೇ ಇದ್ದಾರೆ ಎಮದು ಎಸ್‌ಐಟಿ ಮುಂದೆ ಬಹಿರಂಗ ಪಡಿಸಿದ್ದನು.

ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಪಂಚಮಸಾಲಿ ಲಿಂಗಾಯತ ಮಠದ ವಚನಾನಂದ ಸ್ವಾಮೀಜಿ ನೇತೃತ್ವದ ಸನಾತನ ಸಂತ ನಿಯೋಗವು ದೆಹಲಿಯಲ್ಲಿಂದು ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಧರ್ಮಸ್ಥಳ ಪ್ರಕರಣವನ್ನು ಎನ್‌ಐಎಗೆ ವಹಿಸುವಂತೆ ಮನವಿ ಸಲ್ಲಿಸಿತ್ತು.

ಹಿಂದೂಗಳು ಹಾಗೂ ಹಿಂದೂ ಧಾರ್ಮಿಕ ಕೇಂದ್ರಗಳ ಮೇಲೆ ಹಾಗೂ ಹಿಂದೂ ಮಠಾಧೀಶರ ಮೇಲೆ ಪದೇ ಪದೇ ದಾಳಿಯಾಗುತ್ತಿದೆ. 6 ತಿಂಗಳ ಅಂತರದಲ್ಲಿ ದಾಳಿಗಳು ನಡೆಯುತ್ತಿವೆ. ಈ ವ್ಯವಸ್ಥಿತ ದಾಳಿಗಳ ಹಿಂದೆ ಷಡ್ಯಂತ್ರವಿದೆ. ಹೀಗಾಗಿ ಸೂಕ್ತ ತನಿಖೆ ನಡೆಸಬೇಕು ಎಂದು ಸ್ವಾಮೀಜಿಗಳು ಆಗ್ರಹಿಸಿದ್ದಾರೆ.

ಈ ನಿಯೋಗದಲ್ಲಿ ಮಂಗಳೂರಿನ ಗುರುಪುರ ವಜ್ರದೇಹಿ ಮಠದ ರಾಜಶೇಖರಾನಂದ ಸ್ವಾಮೀಜಿ ಸೇರಿದಂತೆ ವಿವಿಧ 8 ಪೀಠಗಳ ಸ್ವಾಮೀಜಿಗಳು ಈ ನಿಯೋಗದಲ್ಲಿದ್ದರು.ಧರ್ಮಸ್ಥಳ ಪ್ರಕರಣದ ಎಲ್ಲ ಬೆಳವಣಿಗೆಗಳನ್ನು ನಾನೇ ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ. ಧರ್ಮಸ್ಥಳ ಪ್ರಕರಣದ ಬಗ್ಗೆ ಸಚಿವ ಸಂಪುಟ ದಲ್ಲಿ ಸಭೆ ನಡೆಸುತ್ತೇವೆ. ಸಭೆಯ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ.

ಧಾರ್ಮಿಕ ಕ್ಷೇತ್ರಗಳ ವಿರುದ್ಧದ ಅಪಪ್ರಚಾರಕ್ಕೆ ಕಡಿವಾಣ ಹಾಕಲು ಹೊಸ ಕಾನೂನು ತರುತ್ತೇವೆ ಎಂದು ಆಶ್ವಾಸನೆ ನೀಡಿರುವ ಅವರು, ಸಮಾಜವನ್ನು ಜಾಗೃತಿಗೊಳಿಸುವಂತೆ ಸ್ವಾಮೀಜಿಗಳಿಗೆ ಗೃಹ ಸಚಿವರು ಸಲಹೆ ಕೊಟ್ಟಿದ್ದಾರೆ.

ಇತ್ತೀಚೆಗಷ್ಟೆ ಪ್ರತಿಪಕ್ಷ ಬಿಜೆಪಿಯು ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಬಗ್ಗೆ ಶವಗಳನ್ನು ಹೂತಿಟ್ಟಿರುವ ಪ್ರಕರಣದ ವ್ಯಕ್ತಿಗಳ ಹಿಂದಿರುವ ಬಗ್ಗೆ ಎನ್‌ಐಎ ತನಿಖೆ ನಡೆಸಬೇಕು ಎಂದು ಧುಸ್ಥಳ ಚಲೋ ಹಮ್ಮಿಕೊಂಡಿತ್ತು.

ಈ ಬೆಳವಣಿಗೆಗಳ ಬೆನ್ನಲ್ಲೆ ಮಠಾಧೀಶರು ಅಮಿತ್ ಶಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಆದರೆ,ರಾಜ್ಯಸರ್ಕಾರ ಈ ಪ್ರಕರಣವನ್ನು ಎನ್‌ಐಎಗೆ ಒಪ್ಪಿಸಲು ಸ್ಪಷ್ಟವಾಗಿ ನಿರಾಕರಿಸಿದ್ದು, ಎಸ್‌ಐಟಿಯೇ ಸಮರ್ಥವಾಗಿ ತನಿಖೆ ನಡೆಸುತ್ತಿದೆ ಎಂದು ಪ್ರತಿಪಕ್ಷ ಬಿಜೆಪಿಗೆ ತಿರುಗೇಟು ನೀಡಿದೆ.

## ಸೆ. 19 ದಿ ಅನ್‌ಟೋಲ್ಡ್ ಸ್ಟೋರಿ ತೆರೆಗೆ



**ನವದೆಹಲಿ,ಸೆ.4–**ಉತ್ತರ ಪ್ರದೇಶ ಮುಖ್ಯ ಮಂತ್ರಿ ಯೋಗಿ ಆದಿತ್ಯನಾಥ್ ಅವರ ಜೀವನವನ್ನು ಆಧರಿಸಿದ ಅಜಯ್: ದಿ ಅನ್‌ಟೋಲ್ಡ್ ಸ್ಟೋರಿ ಆಫ್ ಎ ಯೋಗಿ ಚಿತ್ರವು ಸೆನ್ಸಾರ್ ಮಂಡಳಿಯಲ್ಲಿ (ಸಿಬಿಎಫ್‌ಸಿ) ದೀರ್ಘಕಾಲ ಸಿಲುಕಿಕೊಂಡಿತ್ತು. ಚಿತ್ರದ ಅನುಮೋದನೆ ಪಡೆಯುವಲ್ಲಿ ವಿಳಂಬವಾದ ಕಾರಣ, ಅದರ ನಿರ್ಮಾಪಕರು ಬಾಂಬೆ ಹೈಕೋರ್ಟ್‌ನ ಮೊರೆ ಹೋಗಿದ್ದರು. ಸುಮಾರು ಒಂದು ತಿಂಗಳ ನಂತರ, ಈಗ ಚಿತ್ರದ ಬಿಡುಗಡೆ ದಿನಾಂಕವನ್ನು ಘೋಷಿಸಲಾಗಿದೆ. ಚಿತ್ರವು ಸೆಪ್ಟೆಂಬರ್ 22, 2025 ರಂದು ಪ್ರೇಕ್ಷಕರಿಗೆ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ.

ಅಜಯ್: ದಿ ಅನ್‌ಟೋಲ್ಡ್ ಸ್ಟೋರಿ ಆಫ್ ಎ ಯೋಗಿ' ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಜೀವನವನ್ನು ಆಧರಿಸಿದೆ. ಈ ಚಿತ್ರವು ಹಲವಾರು ತಿಂಗಳುಗಳಿಂದ ಸುದ್ದಿಯಲ್ಲಿತ್ತು ಮತ್ತು ಈ ಹಿಂದೆ ಆಗಸ್ಟ್ 1, 2025 ರಂದು ಬಿಡುಗಡೆಯಾಗಲು ಯೋಜಿಸಲಾಗಿತ್ತು. ಆದರೆ ಸೆನ್ಸಾರ್ ಮಂಡಳಿಯಿಂದ ಪ್ರಮಾಣಪತ್ರ ಪಡೆಯುವಲ್ಲಿ ವಿಳಂಬವಾದ ಕಾರಣ ಇದು ಸಾಧ್ಯವಾಗಲಿಲ್ಲ. ನಂತರ ಚಿತ್ರದ ನಿರ್ಮಾಪಕರು ನ್ಯಾಯಾಂಗ ಸಹಾಯವನ್ನು ಕೋರಿದರು ಮತ್ತು ಬಾಂಬೆ ಹೈಕೋರ್ಟ್‌ನಲ್ಲಿ ಪ್ರಕರಣವನ್ನು ಹೂಡಿದರು. ನ್ಯಾಯಾಲಯದ ಶಿಫಾರಸು ಮತ್ತು ದೀರ್ಘ ಕಾನೂನು ಪ್ರಕ್ರಿಯೆಯ ನಂತರ, ಚಿತ್ರವು ಈಗ ಸೆಪ್ಟೆಂಬರ್ 19, 2025 ರಂದು ಪ್ರೇಕ್ಷಕರಿಗೆ ಬಿಡುಗಡೆಯಾಗಲಿದೆ.

ತಯಾರಕರು ತಮ್ಮ ಇನ್ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ಬರೆದಿದ್ದಾರೆ, ಯುದ್ಧವು ದೀರ್ಘವಾಗಿತ್ತು ಆದರೆ ಉದ್ದೇಶವು ಕಬ್ಬಿಣದಷ್ಟು ಬಲವಾಗಿತ್ತು. ಈಗ ಅದರ ತೀರ್ಮಾನಕ್ಕೆ ಬರುವ ಸಮಯ ಬಂದಿದೆ. ಕಠಿಣ ಹೋರಾಟದ ನಂತರ, ನಾವು ಅಂತಿಮವಾಗಿ ವಿಜಯವನ್ನು ಆಚರಿಸುತ್ತಿದ್ದೇವೆ.

ಈ ಚಿತ್ರವು ಯೋಗಿ ಆದಿತ್ಯನಾಥ್ ಅವರ ಜೀವನ ಚರಿತ್ರೆಯನ್ನು ಚಿತ್ರಿಸುತ್ತದೆ. ಇದು ಅವರ ಸಾಧು ಜೀವನಶೈಲಿ, ರಾಜಕೀಯದಲ್ಲಿನ ಏರಿಳಿತಗಳು, ಹೋರಾಟ ಮತ್ತು ಮುಖ್ಯಮಂತ್ರಿಯಾಗುವವರೆಗಿನ ಪ್ರಯಾಣವನ್ನು ತೆರೆಗೆ ತರುತ್ತದೆ. ಚಿತ್ರದ ಮೂಲ ಶಾಂತನು ಗುಪ್ತಾ ಅವರ 'ದಿ ಮಾಂಕ್ ಹೂ ಬಿಕಮ್ ಚೀಫ್ ಮಿನಿಸ್ಟರ್' ಪುಸ್ತಕ. ಈ ಪುಸ್ತಕವು ಯೋಗಿ ಆದಿತ್ಯನಾಥ್ ಅವರ ಜೀವನದ ವಿವಿಧ ಅಂಶಗಳನ್ನು ವಿವರ'ವಾಗಿ ವಿವರಿಸುತ್ತದೆ ಮತ್ತು ಈ ಆಧಾರದ ಮೇಲೆ ಚಿತ್ರವನ್ನು (2ನೇಪುಟಕ್ಕೆ)

## ಅಧಿಕಾರಿಗಳ ಭರವಸೆ: ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹಿಂದಕ್ಕೆ ಪಡೆದು ಮನವಿ ಸಲ್ಲಿಕೆ



ಯುವ ಮಾರ್ಗ ಸುದ್ದಿ

**ಮಾನ್ವಿ:** ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ದಲಿತ ಸಂಘಟನೆಗಳ ಒಕ್ಕೂಟ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಪ್ರತಿಭಟನೆ ನಡೆಸಿ ತಹಸೀಲ್ದಾರ್ ರವರಿಗೆ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ರವರಿಗೆ ಮನವಿ ಸಲ್ಲಿಸಿ ದಲಿತ ಮುಖಂಡರಾದ ಶಿವಕುಮಾರ ಮಾತನಾಡಿ ತಾಲೂಕಿನ ಚಿಕ್ಕಕೊಟ್ನೆಕಲ್ ಗ್ರಾಮ ಪಂಚಾಯತಿಯಲ್ಲಿ 15 ನೇ ಹಣಕಾಸು ಯೋಜನೆಯಡಿಯಲ್ಲಿ ಬೃಹತ್ ಮಟ್ಟದಲ್ಲಿ ಅವ್ಯವಹಾರ ನಡೆದಿರುವುದರಿಂದ ಕೂಡಲೇ ತಾ.ಪಂ. ಕಾರ್ಯನಿರ್ವಹಕ ಅಧಿಕಾರಿಗಳು ತನಿಖೆ ನಡೆಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ತಾಲೂಕಿನ ಜಾಗೀರ ಪನ್ನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಜನಾಂಗದವರ ಮೇಲೆ ಕೇಲವರು ದೌರ್ಜನ್ಯ ಮಾಡುತ್ತಿದ್ದು ಅಂತಹವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು. ಹಾಗೂ ಗ್ರಾಮದಲ್ಲಿ ಇನ್ನೂ ಕೂಡ ಅಸ್ಪರ್ಶತೆ ಆಚರಣೆಯಲ್ಲಿದ್ದು ಗ್ರಾಮದಲ್ಲಿ ಅಸ್ಪರ್ಶತೆ ಆಚರಣೆಯ ನಿವಾರಣೆಗಾಗಿ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸಬೇಕು. ಗ್ರಾಮದ ಸ.ನಂ.11 ಮತ್ತು 12 ರಲ್ಲಿನ ಜಮೀನುಗಳಿಗೆ ಪೋತ್ನಾಳ್ ರಸ್ತೆಯಿಂದ ದಾರಿಯ ವ್ಯವಸ್ಥೆ ಮಾಡಿಕೊಡಬೇಕು.ಗ್ರಾಮದಲ್ಲಿ ಹಾದು ಹೋಗುವ ರಾಜ್ಯ ಹೆದ್ದಾರಿ-14 ರಲ್ಲಿ ಬರುವ ಮುಸ್ಲಿಂ ಸಮುದಾಯದವರ ಸ್ಮಾಶನದಿಂದ ಲೊಯೋಲಾ ಆರೋಗ್ಯ ಕೇಂದ್ರದವರೆಗೆ ರಸ್ತೆಯ ಗಡಿಗಳನ್ನು ಗುರುತಿಸಬೇಕು ಮತ್ತು ರಸ್ತೆ ನಿರ್ಮಾಣ ಕಾಮಗಾರಿ ಕಳಪೆಯಾಗಿದ್ದು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಗ್ರಾಮದ ಪ.ಜಾತಿ ಕಾಲೋನಿಯಲ್ಲಿನ ವಿದ್ಯುತ್ ಪರಿವರ್ತಕವನ್ನು ಸ್ಥಳಾಂತರಿಸಬೇಕು. ಚರಂಡಿ ಸ್ವಚ್ಚಗೊಳ್ಳಿಸಿ ಪಾಗೀಂಗ್ ಮಾಡಿಸಬೇಕು, ತೆಗ್ಗು ಪ್ರದೇಶದಲ್ಲಿ ನೀರು ನಿಲ್ಲದಂತೆ ಮರಂ ಹಾಕಿಸಬೇಕು. ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಗ್ರೇಡ್-2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮಾತನಾಡಿ ತಮ್ಮ ಮನವಿಯನ್ನು ಪರಿಶೀಲಿಸಿ (2ನೇಪುಟಕ್ಕೆ)

## ಸಂಗೊಳ್ಳಿ ರಾಯಣ್ಣನ ನಾಮಫಲಕಕ್ಕೆ ಅವಮಾನ: ಆರೋಪಿಗಳ ಬಂಧನಕ್ಕೆ ಒತ್ತಾಯ




ಯುವ ಮಾರ್ಗ ಸುದ್ದಿ

**ಮಾನ್ವಿ,ಸೆ.4–** ತಾಲೂಕಿನ ಪೋತ್ನಾಳ್ ಗ್ರಾಮದಲ್ಲಿ ಭಾರತ ಕಮ್ಯೂನಿಸ್ಟ್ ಪಕ್ಷದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ, ರಾಯಚೂರು-ಸಿಂಧನೂರು ರಾಜ್ಯ ಹೆದ್ದಾರಿಯನ್ನು ಬಂದ್ ಮಾಡಿ ನಾಡತಹಸೀಲ್ದಾರ್ ಮಲ್ಲಿಕಾರ್ಜುನ ಅವರಿಗೆ ಮನವಿ ಸಲ್ಲಿಸಲಾಯಿತು.

ಭಾರತ ಕಮ್ಯೂನಿಸ್ಟ್ ಪಕ್ಷದ ತಾಲೂಕು ಸಮಿತಿ ಕಾರ್ಯದರ್ಶಿ ಯಲ್ಲಪ್ಪ ಉಟಕನೂರು ಮಾತನಾಡಿ, ಉಟಕನೂರು ಗ್ರಾಮದ ಸಂಗೊಳ್ಳಿ ರಾಯಣ್ಣನ ನಾಮಫಲಕಕ್ಕೆ ಕಿಡಿಗೇಡಿಗಳು ಅವಮಾನ ಮಾಡಿದ್ದು, ಡಿ.ವೈ.ಎಸ್.ಪಿ. ನೇತೃತ್ವದಲ್ಲಿ ತಂಡ ರಚಿಸಿ, ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ಪ್ರಮುಖ ಬೇಡಿಕೆಗಳು:** ಪೋತ್ನಾಳ್‌ನಿಂದ ತೋರಣದಿನ್ನಿ ಗ್ರಾಮದ ರಸ್ತೆಯನ್ನು ದುರಸ್ತಿಪಡಿಸಬೇಕು. ಪೋತ್ನಾಳ್ ಮತ್ತು ಉಟಕನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕುಡಿಯುವ ನೀರಿನ ಯೋಜನೆ ಜೆ.ಜೆ.ಎಂ. ಕಾಮಗಾರಿಯ ಅವ್ಯವಹಾರ ತನಿಖೆ. ನರೇಗಾ ಯೋಜನೆಯ ಕೂಲಿಕಾರರ ಖಾತೆಗೆ ಹಣ ಕೂಡಲೇ ಜಮಾ ಮಾಡಬೇಕು.ತಡಕಲ್ ಗ್ರಾಮದಲ್ಲಿ ಮಂಜೂರಾದ ಆಶ್ರಯ(2ನೇಪುಟಕ್ಕೆ)

## ಶಾರದಾ ವಿದ್ಯಾನಿಕೇತನ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಂದ ಕ್ರೀಡೆಗಳಲ್ಲಿ ಉತ್ತಮ ಸಾಧನೆ

ಯುವ ಮಾರ್ಗ ಸುದ್ದಿ



**ಮಾನ್ವಿ,ಸೆ.4–**ಪಟ್ಟಣದ ಗಾಂಧಿ ಮೆಮೋರಿಯಲ್ ಕಾಲೇಜ್ ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ ರಾಯಚೂರು ಹಾಗೂ ಸರಕಾರಿ ಪದವಿ ಪೂರ್ವ ಕಾಲೇಜ್ ಬ್ಯಾಗವಾಟ್ ಮತ್ತು ಸರಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜ್ ಪೋತ್ನಾಳ್ ಸಂಯುಕ್ತಾಶ್ರಯದಲ್ಲಿ ನಡೆದ ವತಿಯಿಂದ ನಡೆದ 2025-26 ನೇ ಸಾಲಿನ ಮಾನ್ವಿ ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಕೂಟದಲ್ಲಿ ಪಟ್ಟಣದ ಶಾರದಾ ವಿದ್ಯಾನಿಕೇತನ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಸಾಧನೆಯನ್ನು ತೋರಿರುವುದಕ್ಕೆ

ತಾಲೂಕು ಮಟ್ಟದ ಬಾಲಕರ ವೈಯಕ್ತಿಕ ಆಟದ ವಿಭಾಗದಲ್ಲಿ ಕಾಲೇಜಿನ ವಿದ್ಯಾರ್ಥಿ ಮೌನೇಶ್ ಚೆಸ್ ಪಂದ್ಯದಲ್ಲಿ ಪ್ರಥಮ ಸ್ಥಾನ, 1500 ಮೀಟರ್ ಬಾಲಕಿಯರ ಓಟದಲ್ಲಿ ಅಶ್ವಿನಿ ಮಲ್ಲದಗುಡ್ಡ ಪ್ರಥಮ ಸ್ಥಾನ, 4*200 ರೀಲೆ ಓಟದಲ್ಲಿ ಅನುಷಾ ಹಿರೇಮಠ ದ್ವಿತೀಯ ಸ್ಥಾನ, 3000 ಮೀಟರ್ ಓಟದಲ್ಲಿ ಆಶ್ವೀನಿ ದ್ವಿತೀಯ ಸ್ಥಾನ, ತ್ರಿಬಲ್ ಜಂಪ್ ನಲ್ಲಿ ಪರಮೇಶ, ತೃತೀಯ ಸ್ಥಾನ. ಗುಂಪು ಆಟಗಳ ವಿಭಾಗದಲ್ಲಿ ಬಾಲಕಿಯರ ಖೋಖೊ ತಂಡ ಪ್ರಥಮ ಸ್ಥಾನವನ್ನು ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವುದಕ್ಕೆ. ಶಾರದ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಬಿ.ಕಿಶೋರ್ ಕುಮಾರ, ಕಾರ್ಯದರ್ಶಿ ಡಾ.ಹೈಂದವಿ ಮಧೂಸೂಧನ್ ಗುಪ್ತಾಜೀ, ಕಾಲೇಜಿನ ಪ್ರಾಚಾರ್ಯರಾದ ವೀರಭದ್ರಯ್ಯ ಹಿರೇಮಠ ಅಭಿನಂದಿಸಿದ್ದಾರೆ.

## ಕಾರ್ಯಕ್ಷಮತೆ ಆಧರಿಸಿ ಪಿಡಿಓಗಳಿಗೆ ಪ್ರಶಂಶನೀಯ ಪತ್ರ: ಈಶ್ವರ್ ಕುಮಾರ್ ಕಾಂದೂ

ಯುವ ಮಾರ್ಗ ಸುದ್ದಿ



**ರಾಯಚೂರು,ಸೆ.4–**ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಅತ್ಯುತ್ತಮವಾಗಿ ಸೇವೆ ಸಲ್ಲಿಸಿದಲ್ಲಿ, ಅದನ್ನು ಗುರುತಿಸಿ, ಪ್ರತಿ ತಿಂಗಳು ಅವರ ಕಾರ್ಯಕ್ಷಮತೆಯ ಆಧಾರದ ಮೇಲೆ ಅತ್ಯುತ್ತಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಂದು ಪ್ರಶಂಶನೀಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಿಸಲಾಗುವುದು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಸೆಪ್ಟೆಂಬರ್ 03ರಂದು ನಡೆದ ನರೇಗಾ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಗಸ್ಟ್-2025ರ ಮಾಹೆಯಲ್ಲಿ ವಿವಿಧ ಯೋಜನೆಗಳಡಿ ಉತ್ತಮ ಪ್ರಗತಿ ಸಾಧಿಸಿದ ಅತ್ಯುತ್ತಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಎಂದು ಆಯ್ಕೆಯಾದ ಲಿಂಗಸೂಗೂರು ತಾಲ್ಲೂಕಿನ ನೀರಲಕೇರೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಬಸವರಾಜ ವಸ್ತ್ರದ ಅವರಿಗೆ ಪ್ರಶಂಶನೀಯ ಪ್ರಮಾಣ ಪತ್ರ ನೀಡಿ ಗೌರವಿಸಲಾಗುತ್ತಿದೆ. ಲಿಂಗಸೂಗೂರು ತಾಲ್ಲೂಕಿನ ನೀರಲಕೇರೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾಳಜಿ ವಹಿಸಿ ಕಾರ್ಯ ಮಾಡಿದ ರೀತಿಯಲ್ಲಿ ಜಿಲ್ಲೆಯ ಇನ್ನುಳಿದ ಪಿಡಿಓ ಅವರು ಸಹ ಉತ್ತಮವಾಗಿ ಕಾರ್ಯನಿರ್ವಹಿಸಬೇಕು. ಮುಂಬರುವ ದಿನಗಳಲ್ಲಿ ಸಹ ಬೇರೆ ಬೇರೆ ಪಿಡಿಓ ಅವರ ಕಾರ್ಯಕ್ಷಮತೆಯನ್ನು ಪರಿಗಣಿಸಿ ಪ್ರಶಸ್ತಿ ನೀಡಲಾಗುತ್ತದೆ. ಪ್ರಶಸ್ತಿ ನೀಡುವುದರಿಂದ ಅವರು ಇನ್ನೂ ಹೆಚ್ಚಿನ ರೀತಿಯಲ್ಲಿ ಕೆಲಸ ಮಾಡಲು ಉತ್ತೇಜನ ನೀಡಿದಂತಾಗುತ್ತದೆ ಎಂದು ಸಿಇಓ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ಧಪ್ಪ ಪೂಜೇರಿ, ಮುಖ್ಯ ಯೋಜ ನಾಧಿಕಾರಿ ಡಾ.ಟಿ.ರೋಣಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆಸರಟ್ಟಿ, ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಯೊಜನೆಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಪಿಡಿಓ ಮತ್ತು ಸಿಬ್ಬಂದಿ ಸಭೆಯಲ್ಲಿ ಇದ್ದರು.

## ಮೊದಲನೇಯ ಪುಟದಿಂದ

# ಸಂಗೊಳ್ಳಿ ರಾಯಣ್ಣನ ನಾಮಫಲಕಕ್ಕೆ ಅವಮಾನ: ಆರೋಪಿಗಳ ಬಂಧನಕ್ಕೆ ಒತ್ತಾಯ

ಮನೆಗಳ ಹಕ್ಕುಪತ್ರ ವಿತರಣೆ ಮತ್ತು ನಿವಾಸಿಗಳಿಗೆ ರಸ್ತೆ ನಿರ್ಮಾಣ.ಪೋತ್ನಾಳ್‌ನ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯಾಧಿಕಾರಿ ಹುದ್ದೆ ಭರ್ತಿ. ಕಂದಾಯ ಇಲಾಖೆಯ ದಾಖಲೆಗಳನ್ನು ರೈತರಿಗೆ ನಿಗದಿತ ಅವಧಿಯಲ್ಲಿ ನೀಡಬೇಕು. 15ನೇ ಹಣಕಾಸು ಯೋಜನೆಯ ಅವ್ಯವಹಾರಗಳ ಬಗ್ಗೆ ತನಿಖೆ. ಕೃಷಿ ಪರಿಕರಗಳ ಮಾರಾಟ ಮಳಿಗೆಗಳಲ್ಲಿ ರೈತರಿಗೆ ಬೀಜ, ರಸಗೊಬ್ಬರ, ಕೀಟನಾಶಕಗಳು ಲಭ್ಯವಾಗುವಂತೆ ಕ್ರಮ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಮೂಲಸೌಲಭ್ಯಗಳನ್ನು ಖಚಿತಪಡಿಸಿಕೊಂಡು ಹೊಸ ವಸತಿ ವಿನ್ಯಾಸಗಳಿಗೆ ಅನುಮೋದನೆ ನೀಡಬೇಕು.

ಪೋತ್ನಾಳ್ ಗ್ರಾಮದ ಹುಚ್ಚಬುಡೇಶ್ವರ ವೃತ್ತದಲ್ಲಿ ರಾಯಚೂರು–ಸಿಂಧನೂರು ರಾಜ್ಯ ಹೆದ್ದಾರಿಯನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಿದ್ದರಿಂದ ಕೆಲವು ಕಾಲ ವಾಹನ ಸಂಚಾರ ಸ್ಥಗಿತಗೊಂಡಿತು.

ಪ್ರತಿಭಟನೆಯಲ್ಲಿ ಪ್ರಕಾಶ ತಡಕಲ್, ಪ್ರಕಾಶ ದೋತ್ರಬಂಡಿ, ಮಲ್ಲು ತಡಕಲ್, ನಾಗರಾಜ ತಡಕಲ್, ಕರಿಯಪ್ಪ, ಸಣ್ಣಪ್ಪ, ಹನುಮಂತ ಯಾದವ್, ಶಿವರಾಜ ಯಾದವ್, ಭೀಮಣ್ಣ, ಹುಚ್ಚಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಅಧಿಕಾರಿಗಳ ಭರವಸೆ: ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹಿಂದಕ್ಕೆ ಪಡೆದು ಮನವಿ ಸಲ್ಲಿಕೆ

ಸಂಬಂದಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಜಾಗೀರ ಪನ್ನೂರು ಗ್ರಾಮಕ್ಕೆ ಮಂಗಳವಾರ ಭೇಟಿ ನೀಡಿ ಸಮಸ್ಯೆಗಳ ನಿವಾರಣೆಗೆ ಅಗತ್ಯಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ತಾ.ಸಮಾಜ ಕಲ್ಯಾಣಾಧಿಕಾರಿ ನಟರಾಜ, ತಾ.ಪಂ. ಇ.ಓ.ಖಾಲೀದ್ ಅಹಮ್ಮದ್ ರವರು ಕೂಡ ಮನವಿ ಸ್ವೀಕರಿಸಿದರು.

ಸೇರಿದಂತೆ ದಲಿತ ಪರ ಸಂಘಟನೆಗಳ ಮುಖಂಡರಾದ ಸದಾನಂದ , ಅಬ್ರಹಾಂ ಪನ್ನೂರು, ಬಸವರಾಜ ನಕ್ಕುಂದಿ, ಯಮುನಪ್ಪ, ಪ್ರಸನ್ನ ಕುರ್ಡಿ,ಹುಸೇನಪ್ಪ ಜಗ್ಲಿ, ರವಿಕುಮಾರ ಮದ್ಲಾಪುರ್, ರಾಘವೇಂದ್ರ. ಮೀಕೆಲಪ್ಪ, ರವೀಂದ್ರಜಾನೇಕಲ್ , ರಂಗಮ್ಮ, ಕಾಡಮ್ಮ, ನೀಲಮ್ಮ, ಮರಿಯಮ್ಮ, ಚಿನ್ನಮ್ಮ, ಮಾರೇಮ್ಮ, ಪುಷ್ಪಮ್ಮ, ದೇವಮ್ಮ, ಯಲ್ಲಮ್ಮ ಆನಿತಾ, ಲಕ್ಷ್ಮೀ, ಸೇರಿದಂತೆ ಇನ್ನಿತರರು ಇದ್ದರು.

# ಸೆ. 19 ದಿ ಅನ್‌ಟೋಲ್ಡ್ ಸ್ಟೋರಿ ತೆರೆಗೆ

ನಿರ್ದೇಶಿಸಲಾಗಿದೆ. ಅಜಯ್: ದಿ ಅನ್‌ಟೋಲ್ಡ್ ಸ್ಟೋರಿ ಆಫ್ ಎ ಯೋಗಿ ಚಿತ್ರದ ಪ್ರಮುಖ ನಟರು:

ದಿನೇಶ್ ಲಾಲ್ ಯಾದವ್ ಪ್ರಮುಖ ಪಾತ್ರದಲ್ಲಿಪರೇಶ್ ರಾವಲ್, ಅಜಯ್ ಮೆಂಗಿ,ಪವನ್ ಮಲ್ಹೋತ್ರಾ,ರಾಜೇಶ್ ಖಟ್ಟರ್,ಗರಿಮಾ ವಿಕ್ರಾಂತ್ ಸಿಂಗ್,ಸರ್ವರ್ ಅಹುಜಾ ನಟಿಸಿದ್ದಾರೆ.ನಿರ್ದೇಶಕ ರವೀಂದ್ರ ಗೌತಮ್ ಈ ಚಿತ್ರವನ್ನು ನಿರ್ದೇಶಿಸಿದ್ದಾರೆ ಮತ್ತು ಮೀಟ್ ಬ್ರದರ್ಸ್ ಸಂಗೀತ ಮತ್ತು ಹಿನ್ನೆಲೆ ಸಂಗೀತವನ್ನು ಸಂಯೋಜಿಸಿದ್ದಾರೆ. ಸೆಪ್ಟೆಂಬರ್ 19 ರಂದು ಬಿಡುಗಡೆಯಾದ ನಂತರ, ಚಿತ್ರವು ದೇಶಾದ್ಯಂತ ಚಿತ್ರಮಂದಿರಗಳಲ್ಲಿ ಪ್ರದರ್ಶನಗೊಳ್ಳಲಿದೆ.

## ವಿಕಲಚೇತನರ ಇಲಾಖೆಯಿಂದ ನಾನಾ ಸೌಕರ್ಯ: ಅರ್ಜಿ ಆಹ್ವಾನ

**ರಾಯಚೂರು** ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2025–26 ನೇ ಸಾಲಿಗೆ ಜಾರಿಯಲ್ಲಿರುವ ವಿವಿಧ ಯೋಜನೆಗಳಡಿ ಸೇವಾ–ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ವಿಕಲಚೇತನ ಫಲಾನುಭವಿಗಳು ವಿವಿಧ ಯೋಜನೆಗಳಾದ, ಆಧಾರ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ–ಸಲಕರಣೆ ಯೋಜನೆ, ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ಆನ್‌ಲೈನ್ ವೆಬ್ ಸೈಟ್‌ಗಳಾದ ಸೇವಾ–ಸಿಂಧು ತಂತ್ರಾಂಶದಡಿ ಗ್ರಾಮ–ಓನ್, ಕರ್ನಾಟಕ–ಓನ್, ಬೆಂಗಳೂರು–ಓನ್ ಹಾಗೂ https://sevasindhu.karnataka.gov.in/Sevasindhu/Kannada ಪೋರ್ಟಲ್ ಮೂಲಕ ಸೆಪ್ಟೆಂಬರ್ 30 ರೊಳಗೆ ಅರ್ಜಿಗಳನ್ನು ಸೂಕ್ತ ದಾಖಲಾತಿಗಳೊಂದಿಗೆ ಆನ್‌ಲೈನ್ ಮುಖಾಂತರ ಸಲ್ಲಿಸಬಹುದಾಗಿದೆ. ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದಂತೆ ಸಂಪೂರ್ಣವಾದ ಮಾರ್ಗದರ್ಶನಕ್ಕಾಗಿ, ತಾಲೂಕಿನ ಎಂ.ಆರ್.ಡಬ್ಲ್ಯೂ ಅಧಿಕಾರಿಗಳನ್ನು ಸಂಪರ್ಕಿಸಲು ದೂರವಾಣಿ ಸೊಖ್ಯೆ: ರಾಯಚೂರು ತಾಲೂಕಿನ ಎಂ.ಆರ್.ಡಬ್ಲ್ಯೂ ಅಧಿಕಾರಿಗಳಾದ, ಅಮರೇಶ ಯಾದವ್–9972237508, ಮಾನವಿ–ಸಿರವಾರ ತಾಲೂಕಿನ ಎಂ.ಆರ್.ಡಬ್ಲ್ಯೂ ಅಧಿಕಾರಿಗಳಾದ ರಾಘವೇಂದ್ರ–9740203769, ದೇವದುರ್ಗ ತಾಲೂಕಿನ ಎಂ.ಆರ್.ಡಬ್ಲ್ಯೂ ಅಧಿಕಾರಿಗಳಾದ ಲೋಕಪ್ಪ ನೂರು ನಾಯ್ಕೆ–9945207693, ಸಿಂಧನೂರು ತಾಲೂಕಿನ ಎಂ.ಆರ್.ಡಬ್ಲ್ಯೂ ?? ಅಧಿಕಾರಿಗಳಾದ ಬಸವರಾಜ ಸಾಸಲಮರಿ–9900298217, ಲಿಂಗಸ್ಗೂರು–ಮಸ್ಕಿ, ತಾಲೂಕಿನ ಎಂ.ಆರ್.ಡಬ್ಲ್ಯೂ ಅಧಿಕಾರಿಗಳಾದ ನಾಗರಾಜ–9901668380 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ, ಕಚೇರಿಗೆ ಕಚೇರಿ ಕೆಲಸದ ಸಮಯದಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂನಿಂದ ಸೆಪ್ಟೆಂಬರ್ 6ರಂದು ಗ್ರಾಹಕರ ಕುಂದುಕೊರತೆ ಸಭೆ

**ರಾಯಚೂರು ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 6ರ ಬೆಳಿಗ್ಗೆ 10 ಗಂಟೆಗೆ ಗ್ರಾಹಕರ ಕುಂದುಕೊರತೆ ಸಭೆಯನ್ನು ಅಧೀಕ್ಷಕ ಅಭಿಯಂತರರ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಸಭೆಗೆ ರಾಯಚೂರು ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಂಗಸುಗೂರು: ಮೀನುಗಾರಿಕೆ ಪರವಾನಿಗೆಗೆ ಅರ್ಜಿ ಆಹ್ವಾನ

**ರಾಯಚೂರು.ಸೆ.4–**ಮೀನುಗಾರಿಕೆ ಇಲಾಖೆಯಿಂದ ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಕೃಷ್ಣ ನದಿಭಾಗದ ಐದಬಾವಿಯಿಂದ ತಿಂತಿಣಿ ಬ್ರಿಡ್ಜರೆಗೆ ಮೀನುಗಾರಿಕೆ ಪರವಾನಿಗೆಗಾಗಿ ಅರ್ಹ ಮೀನುಗಾರರಿಂದ ಅರ್ಜಿ ಆಹ್ವಾನಿಸ`ಲಾಗಿದೆ.

ಪರವಾನಿಗೆಯನ್ನು ಕಚೇರಿಯಲ್ಲಿ ನೀಡಲಾಗುತ್ತಿದ್ದು, ಸ್ಥಳೀಯ ಅರ್ಹ ಮೀನುಗಾರರು ವಾಸಸ್ಥಳ ಗುರುತಿನ ಚೀಟಿಯೊಂದಿಗೆ ನಿಗದಿತ ಶುಲ್ಕ ಪಾವತಿಸಿ ಪರವಾನಿಗೆ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಲಿಂಗಸುಗೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಲಿಂಗಸುಗೂರಿನ ಮೀನುಗಾರಿಕೆಯ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳ ಆಯ್ಕೆ

**ರಾಯಚೂರು,ಸೆ.4–**2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಆಯ್ಕೆ ಮಾಡಲಾಗುತ್ತಿದೆ.

ನಾಗಪುರ ದೀಕ್ಷಾಭೂಮಿಗೆ ಯಾತ್ರೆ ಕೈಗೊಳ್ಳಲು ಸಮಾಜ ಕಲ್ಯಾಣ ಇಲಾಖೆಯಿಂದ ಬಸ್ಸು ಮತ್ತು ರೈಲಿನ ವ್ಯವಸ್ಥೆ ಮಾಡಲಾಗುತ್ತದೆ. ದಿಕ್ಷಾಭೂಮಿಗೆ ಭೇಟಿ ನೀಡುವ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ವಿಳಾಸ: https://swd.karnataka.gov.in/website ನಲ್ಲಿ ಸೆಪ್ಟೆಂಬರ್ 9ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಸಹಾಯಕ ನಿರ್ದೇಶಕರ ಕಚೇರಿ ಮೊ:9480843184, ಮಾನ್ವಿ ಸಹಾಯಕ ನಿರ್ದೇಶಕರ ಕಚೇರಿ ಮೊ: 9480843183, ಲಿಂಗಸೂರು ಸಹಾಯಕ ನಿರ್ದೇಶಕರ ಕಚೇರಿ ಮೊ: 9480843182, ದೇವದುರ್ಗ ಸಹಾಯಕ ನಿರ್ದೇಶಕರ ಕಚೇರಿ 9480843181, ಮತ್ತು ಸಿಂಧನೂರ ಸಹಾಯಕ ನಿರ್ದೇಶಕರ ಕಚೇರಿ ಮೊ. 9480843185 ಇವರಿಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡಗೀತೆ ಕರ್ನಾಟಕದ ಶ್ರೇಷ್ಠತೆ, ಗೌರವದ ಸಂಕೇತ



**ಕಲಬುರಗಿ: ಸೆ.4–**ರಾಷ್ಟ್ರಕವಿ ಕುವೆಂಪು ಅವರಿಂದ ರಚಿತವಾದ 'ಜಯ ಭಾರತ ಜನನಿಯ ತನುಜಾತೆ' ಒಂದು ಕನ್ನಡ ಕವಿತೆಯಾಗಿದ್ದು ಇದು ಕರ್ನಾಟಕದ ನಾಡಗೀತೆಯಾಗಿದೆ. ಇದು ನಮ್ಮ ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ, ಭವ್ಯ ಪರಂಪರೆ, ನುಡಿ, ಸಾಹಿತ್ಯ ಸೇರಿದಂತೆ ಅನೇಕ ಅಂಶಗಳು ಒಳಗೊಂಡಿದ್ದು, ನಾಡಿನ ಶ್ರೇಷ್ಠತೆ, ಗೌರವದ ಸಂಕೇತವಾಗಿದೆ ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ್ ಅಭಿಮತಪಟ್ಟರು.

ನಗರದ ಆಳಂದ ರಸ್ತೆಯ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಸಂಜೆ ಜರುಗಿದ 'ನಾಡಗೀತೆಯ ಶತಮಾನೋತ್ಸವ ಅಚರಣೆ'ಯ ಕಾರ್ಯಕ್ರಮದಲ್ಲಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.

ಈ ಗೀತೆಯು 1924–25ರ ಆಸುಪಾಸಿನಲ್ಲಿ ಬರೆಯಲ್ಪಟ್ಟಿದೆ. ಜನವರಿ–6, 2004 ರಂದು ರಾಜ್ಯದ ಅಧಿಕೃತ ನಾಡಗೀತೆ ಎಂದು ಘೋಷಿಸಿದ ನಾಡಗೀತೆಯಲ್ಲಿ ಕನ್ನಡ ನಾಡು, ನುಡಿ, ಭಾಷೆ, ಸಹಬಾಳ್ವೆ, ಆತ್ಮವಿಶ್ವಾಸ, ಶಕ್ತಿ ಮತ್ತು ಘನತೆಯನ್ನು ಕಾಪಾಡಿಕೊಳ್ಳುವ ಕರ್ನಾಟಕದ ಹೆಮ್ಮೆಯನ್ನು ವರ್ಣಿಸಲಾಗಿದೆ. ತೈಲಪ ಮತ್ತು ಹೊಯ್ಸಳರ ಆಳ್ವಿಕೆ, ಕೃಷ್ಣ, ಶರಾವತಿ, ತುಂಗಾ ಮತ್ತು ಕಾವೇರಿ ನದಿಗಳು, ಶಂಕರಚಾರ್ಯ, ರಾಮಾನುಚಾರ್ಯ, ಬಸವೇಶ್ವರ, ಚೈತನ್ಯ, ಪರಮಹಂಸ, ಸ್ವಾಮಿ ವಿವೇಕಾನಂದ ಸೇರಿದಂತೆ ಮಹನೀಯರನ್ನು ಜನ್ಮನೀಡಿದ ಭಾರತಮಾತೆಯ ಮಗಳಾದ ಕರ್ನಾಟಕ ಮಾತೆ ನಿನಗೆ ಜಯವಾಗಲಿ ಎಂದು ನಾಡನ್ನು ಬಣ್ಣಿಸಲಾಗಿದೆ ಎಂದರು.

ಕನ್ನಡ ನಾಡು ಎಲ್ಲಾ ಸಮುದಾಯಗಳನ್ನೊಳಗೊಂಡ ಶಾಂತಿಯ ತೋಟವಿದೆ. ಹಿಂದೂಗಳು, ಕ್ರಿಶ್ಚಿಯನ್ನರು, ಮುಸ್ಲಿಮರು, ಪಾರ್ಸಿಗಳು, ಜೈನರು ಸೇರಿದಂತೆ ವಿವಿಧ ಧರ್ಮಿಯರು ಹೊಂದಿರುವ ಪ್ರಸಿದ್ಧ ನಾಡಿದು. ಜನಕನಂತಿರುವ ಅನೇಕ ರಾಜರ ಅರಮನೆಗಳು ಹಾಗೂ ಗಾಯಕರು ಮತ್ತು ಸಂಗೀತಗಾರರಿಗೆ ಜನ್ಮವಿತ್ತ ಕರ್ನಾಟಕ ಮಾತೆಗೆ ಸದಾ ಚಿರರುಣಿ. ಸುಂದರವಾದ ನದಿಗಳು ಮತ್ತು ವನಗಳನ್ನು ಹೊಂದಿರುವ ಭೂಮಿಗೆ ಜಯವಾಗಲಿ ಮತ್ತು ರಸಋಷಿಗಳ ವಾಸಸ್ಥಾನವಾಗಿರುವ ಈ ನಾಡಿಗೆ ಜಯವಾಗಲಿ ಎಂದು ಸರ್ವ ಕೊಡುಗೆಯೂ ನೀಡಿರುವ ಆ ತಾಯಿ ಭಾರತಾಂಬೆಯ ಮಗಳಾದ ಕರ್ನಾಟಕ ದೇವಿಗೆ ನಮಸ್ಕರಿಸಲಾಗಿದೆ. ಪ್ರತಿಯೊಬ್ಬ ಕನ್ನಡಿಗ ನಾಡಗೀತೆಯನ್ನು ಹೃದಯಾಂತರದಿಂದ ಹಾಡಬೇಕು. ಅದರ ಆಶಯದಂತೆ ಎಲ್ಲರ ಜೊತೆ ಸಹಜೀವನ ಸಾಗಿಸಬೇಕು. ರಾಷ್ಟ್ರಕವಿ ಕುವೆಂಪು ಅವರ ವಿಶ್ವ ಭ್ರಾತೃತ್ವದ ತತ್ವವನ್ನು ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದ ಶಾಸಕ



**ಬಳ್ಳಾರಿ, ಸೆ.04–** ನಗರ ಶಾಸಕ ನಾರಾ ಭರತ್ ರೆಡ್ಡಿ ನಗರದ ವಿವಿಧ ವಾರ್ಡಗಳಲ್ಲಿ ಹಲವು ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಅಂದಾಜು 20 ಲಕ್ಷ ರೂ.ಗಳ ವೆಚ್ಚದ ಅಂಗನವಾಡಿ ಕೇಂದ್ರ ನಿರ್ಮಾಣ ಕಾಮಗಾರಿಗೆ 20ನೇ ವಾರ್ಡಿನ ಮಾರುತಿ ಕಾಲೋನಿಯಲ್ಲಿ ಚಾಲನೆ ನೀಡಲಾಯಿತು. ವಾರ್ಡ್ ಸಂಖ್ಯೆ 09ರ ಡಿ.ಸಿ.ಕಾಲೋನಿಯ ರಸ್ತೆ ನಿರ್ಮಾಣಕ್ಕಾಗಿ (9.52 ಲಕ್ಷ ರೂ.ಗಳು ಮತ್ತು 11.13 ಲಕ್ಷ ರೂ.ಗಳ) 2 ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ಅದೇ ರೀತಿ ವಾರ್ಡ್ ಸಂಖ್ಯೆ 8 ರ ಅಂದ್ರಾಳು ಗ್ರಾಮದ ಮಳೆ ನೀರು ಚರಂಡಿ ನಿರ್ಮಾಣಕ್ಕಾಗಿ 80 ಲಕ್ಷ ರೂ.ಗಳ ಅನುದಾನದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಲಾಯಿತು. ಅದೇ ರೀತಿ ಸರ್ಕಾರಿ ಪ್ರಾಥಮಿಕ ಶಾಲೆಯ 5 ನೂತನ ಕೊಠಡಿಗಳ ನಿರ್ಮಾಣಕ್ಕೆ 98 ಲಕ್ಷ ರೂ.ಗಳ ಅನುದಾನದ ಕಾಮಗಾರಿಗೆ ಶಾಸಕ ನಾರಾ ಭರತ್ ರೆಡ್ಡಿ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭ ಪಾಲಿಕೆಯ ಸದಸ್ಯ ರಾಮಾಂಜನೇಯ ಸೇರಿದಂತೆ ಹಲವರು ಹಾಜರಿದ್ದರು.

# ದೌರ್ಜನ್ಯವಾದರೆ ಅಕ್ಕ ಪಡೆ ಗಮನಕ್ಕೆ ತನ್ನಿ




**ಬೀದರ್: ಸೆ.4–**ಹೆಣ್ಣುಮಕ್ಕಳು ತಮ್ಮ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆದರೆ ಕೂಡಲೇ ಅಕ್ಕ ಪಡೆಯ ಗಮನಕ್ಕೆ ತರಬೇಕು ಎಂದು

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಅವರ ಪತ್ನಿ ಶೈನಿ ಗುಂಟಿ ಹೇಳಿದರು.ಋಷಿಕೇಶ ಶಿಕ್ಷಣ ಸಂಸ್ಥೆ ಸಂಚಾಲಿತ ನಗರದ ಅರುಣೋದಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಬುಧವಾರ ನಡೆದ ಕಾನೂನು ಅರಿವು–ನೆರವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಅಕ್ಕ ಪಡೆ ಹೆಣ್ಣುಮಕ್ಕಳ ರಕ್ಷಣೆಗಾಗಿಯೇ ಇದೆ. ಹೀಗಾಗಿ ಏನೇ ಸಮಸ್ಯೆ ಇದ್ದರೂ ಪಡೆ ಮುಂದೆ ಹೇಳಿಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳು ಸುರಕ್ಷಿತ ಹಾಗೂ ಅಸುರಕ್ಷಿತ ಸ್ಪರ್ಶಗಳ ಬಗ್ಗೆ ಅರಿತುಕೊಳ್ಳಬೇಕು. ಸಂಕಷ್ಟದ ಸಂದರ್ಭದಲ್ಲಿ 112 ಅಥವಾ 1098ಗೆ ಕರೆ ಮಾಡಬೇಕು ಎಂದು ಸಲಹೆ ಮಾಡಿದರು. ಸಾರ್ವಜನಿಕರ ರಕ್ಷಣೆ ಪೊಲೀಸರ ಕರ್ತವ್ಯವಾಗಿದೆ. ಹೀಗಾಗಿ ಮಕ್ಕಳು ಪೊಲೀಸರ ಬಗ್ಗೆ ಭಯ ಇಟ್ಟುಕೊಳ್ಳಬಾರದು. ಅವರೊಂದಿಗೆ ಮಾಹಿತಿಯನ್ನು ಮುಕ್ತವಾಗಿ ಹಂಚಿಕೊಳ್ಳಬೇಕು ಎಂದು ಅಕ್ಕ ಪಡೆಯ ಎಎಐ ಸಂಗೀತಾ ಎಂ.ಬಿ. ಹೇಳಿದರು.

ಬಾಲ್ಯ ವಿವಾಹ ಸಮಾಜಕ್ಕೆ ಮಾರಕವಾಗಿದೆ. ಶಿಕ್ಷಾರ್ಹ ಅಪರಾಧವೂ ಆಗಿದೆ. ಅದನ್ನು ತಡೆಗಟ್ಟಲು ಎಲ್ಲರೂ ಪೊಲೀಸ್ ಇಲಾಖೆ ಜತೆಗೆ ಕೈಜೋಡಿಸಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಶಾಲೆಯ ಆಡಳಿತಾಧಿಕಾರಿ ಸಂತೋಷಕುಮಾರ ಮಂಗಳೂರೆ ನುಡಿದರು.

ಅಕ್ಕ ಪಡೆಯ ಅಂಬಿಕಾ ಸಂತೋಷ್, ನೀಲಮ್ಮ, ಅಂಬಿಕಾ, ಶ್ರೀದೇವಿ ಮತ್ತಿತರರು ಇದ್ದರು. ಪ್ರಶಾಂತ ಚಕ್ರವರ್ತಿ ಸ್ವಾಗತಿಸಿದರು. ನೀಲಮ್ಮ ಗಜಲೆ ನಿರೂಪಿಸಿದರು. ಗಣಪತಿ ವಂದಿಸಿದರು.

## ರಾಯಚೂರು ಮಹಾನಗರ ಪಾಲಿಕೆಯಿಂದ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.4–** ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯ ವತಿಯಿಂದ 2019–20 ಹಾಗೂ 2021–22ನೇ ಸಾಲಿನ ನಗರಸಭೆ ನಿಧಿಯ ಶೇ.5ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2019–20ನೇ ಸಾಲಿನ ಜೀವ ವಿಮಾ ಅಥವಾ ಆರೋಗ್ಯ ಯೋಜನೆಯ ವಾರ್ಷಿಕ ಪ್ರೀಮಿಯಂ ಕಂತುಗಳನ್ನು ವಿಕಲಚೇತನರ ಜನರಿಗೆ ವಿಮೆಯನ್ನು ಮಾಡಿಸಲಾಗುತ್ತದೆ. ನವೀಕರಿಸಿ ವಿಮಾ ಮೊತ್ತವನ್ನು ಪಾವತಿಸುವುದಿಲ್ಲ.

**ದಾಖಲಾತಿಗಳು:** ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ, ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಪೋಟೋ ಅಳತೆಯ ಭಾವಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ ಹಾಗೂ ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈದ್ಯರಿಂದ ಪಡೆದ ಗುರುತಿನ ಚೀಟಿ ಅಥವಾ ಯು.ಡಿ.ಐ. ಕಾರ್ಡ್ ಹಾಗೂ ಮೊಬೈಲ್ ನಂಬರ್‌ನೊಂದಿಗೆ ಸೆಪ್ಟೆಂಬರ್ 18ರ ಸಂಜೆ 5 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯು ತಿರಸ್ಕೃತ ಮಾಡುವರು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ.11ರಂದು ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಪ್ರವಾಸ

**ರಾಯಚೂರು,ಸೆ.4–**ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಸೆಪ್ಟೆಂಬರ್ 11ರ ಮಧ್ಯಾಹ್ನ 3.30ಕ್ಕೆ ರಾಯಚೂರು ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಮುಖಂಡರು ಮತ್ತು ಸಾರ್ವಜನಿಕರೊಂದಿಗೆ ಸಮಾಲೋಚನೆ ಮತ್ತು ಕುಂದು–ಕೊರತೆ ಸಭೆ ನಡೆಸಲಿದ್ದಾರೆ. ಈ ಸಭೆಗೆ ಅಲ್ಪಸಂಖ್ಯಾತರ ಸಮುದಾಯದ ಮುಖಂಡರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಡಾ ಹಗರಣ, ಕಮಿಷನ್ ದಂಧೆ ಕುರಿತು ಸಂಪುಟದಲ್ಲಿ ಚರ್ಚೆ

**ಬೆಂಗಳೂರು, ಸೆ.4–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಡಾ ಹಗರಣ, ಬಿಬಿಎಂಪಿ ಕಮಿಷನ್ ಭ್ರಷ್ಟಾಚಾರ ಸೇರಿದಂತೆ ಹಲವಾರು ಮಹತ್ವದ ವಿಷಯಗಳ ಚರ್ಚೆಯಾಗಿವೆ. ರಾಜ್ಯದ ವಿವಿಧ ಪೊಲೀಸ್? ಠಾಣೆಗಳಲ್ಲಿ ದಾಖಲಾಗಿರುವ 62 ಕ್ರಿಮಿನಲ್ ಮೊಕದ್ದಮೆ ಗಳನ್ನು ಅಭಿಯೋಜನೆಯಿಂದ ಹಿಂಪಡೆಯುವ ಬಗ್ಗೆ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ರೈತರು, ಕನ್ನಡಪರ ಸಂಘಟನೆಗಳು ಸೇರಿದಂತೆ ಹೋರಾಟಗಾರರ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣಗಳನ್ನು ಕೈಬಿಡುವ ಕುರಿತಂತೆ ಸಮಾಲೋಚನೆ ನಡೆಸಲಾಗಿದೆ.

ಬೆಂಗಳೂರು ಮಹಾನಗರ ಪಾಲಿಕೆಯ ಕಾಮಗಾರಿಗಳ ಅವ್ಯವಹಾರ, ಭ್ರಷ್ಟಾಚಾರದ ಆರೋಪಗಳ ಕುರಿತು ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಆಯೋಗದ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿಂದು ಮಂಡಿಸಲಾಗಿದ್ದು, ಮುಂದಿನ ಕ್ರಮಗಳ ಬಗ್ಗೆ ಚರ್ಚೆಯಾಗಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿನ ಆರೋಪಗಳಿಗೆ ಸಂಬಂಧಿಸಿದಂತೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಪಿ.ಎನ್.ದೇಸಾಯಿ ಏಕಸದಸ್ಯ ವಿಚಾರಣಾ ಆಯೋಗವು ನೀಡಿರುವ ವರದಿಯ ಬಗ್ಗೆಯೂ ಚರ್ಚಿಸಲಾಗಿದೆ.

ಮುಡಾ ಹಗರಣ ರಾಜ್ಯದಲ್ಲಿ ಭಾರಿ ಸದ್ದು ಮಾಡಿತ್ತು. ಒಂದು ಹಂತದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಕ್ಕಟ್ಟಿಗೆ ಸಿಲುಕಿಸಿತ್ತು. ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ಅಕ್ರಮವಾಗಿ 13 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂಬ ಆರೋಪಗಳಿದ್ದವು. ಅದು ಒಂದೆಡೆಯಾದರೆ, ಮುಡಾದ ನಿವೇಶನ ಹಂಚಿಕೆಯಲ್ಲಿ ಭಾರೀ ಪ್ರಮಾಣದ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪಗಳ ಸಮಗ್ರ ತನಿಖೆಗೆ ಸಿದ್ದರಾಮಯ್ಯ ನ್ಯಾಯಾಂಗ ಆಯೋಗ ರಚಿಸಿದ್ದರು. ಅದರ ವರದಿ



ಸಲ್ಲಿಕೆಯಾಗಿದ್ದು ಆ ಬಗ್ಗೆ ಸಂಪುಟದಲ್ಲಿ ಚರ್ಚಿಸಲಾಗಿದೆ. ಕೋವಿಡ್–19 ಸಂದರ್ಭದಲ್ಲಿ ಆಮ್ಲಜನಕ ಕೊರತೆಯಿಂದ ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ 20ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದರು. ಆ ವೇಳೆ ವಿರೋಧಪಕ್ಷ ನಾಯಕರಾಗಿದ್ದ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ.ಕೆ.ಶಿವಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಮೃತಪಟ್ಟವರ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ವಿಶೇಷ ಪ್ರಕರಣವೆಂದು ಪರಿಗಣಿಸಿ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರದ ಉದ್ಯೋಗ ನೀಡಲು ಒತ್ತಾಯಿಸಿದರು. ಆದರೆ ಬಿಜೆಪಿ ಸರ್ಕಾರ ಅದನ್ನು ಪರಿಗಣಿಸಿರಲಿಲ್ಲ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಬಳಿಕ ಈ ಹಿಂದೆ ತಾವು ಕೊಟ್ಟ ಮಾತಿನಂತೆ ನಡೆದುಕೊಳ್ಳಲು ಮುಂದಾಗಿದೆ. ಮೃತಪಟ್ಟವರ ಕುಟುಂಬದ ಅರ್ಹ ಅವಲಂಬಿತರಿಗೆ ಅನುಕಂಪ ಆಧಾರದ ಮೇಲೆ ಉದ್ಯೋಗ ಒದಗಿಸುವ ಬಗ್ಗೆ ಇಂದಿನ ಸಚಿವ ಪಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ.

# ಪರಿಸರ ಸಂರಕ್ಷಣೆಗೆ, ಸಮತೋಲನಕ್ಕೆ ಸುಪ್ರೀಂ ಸೂಚನೆ

**ನವದೆಹಲಿ, ಸೆ. 4–** ಉತ್ತರ ಭಾರತದ ಹಲವವು ರಾಜ್ಯಗಳು ಹಾಗೂ ರಾಷ್ಟ್ರ ರಾಜಧಾನಿಯನ್ನು ತೀವ್ರ ಬಾಧಿಸುತ್ತಿರುವ ಪ್ರವಾಹ ಪರಿಸ್ಥಿತಿಯಿಂದಾಗಿ ಎಚ್ಚೆತ್ತಿರುವ ಸುಪ್ರೀಂ ಕೋರ್ಟ್, ಗುರುವಾರ ಅನಿಯಂತ್ರಿತ ಅಕ್ರಮ ಮರಗಳನ್ನು ಕಡಿಯುವುದನ್ನು ಉಲ್ಲೇಖಿಸಿದೆ.

ಜತೆಗೆ ಕಾನೂನುಗಳನ್ನು ಬಹಿರಂಗವಾಗಿ ಉಲ್ಲಂಘಿಸಲಾಗುತ್ತಿದೆ ಎಂದಿರುವ ಸರ್ವೋಚ್ಚ ನ್ಯಾಯಾಲಯ, ಈ ಸಂಬಂಧ ಕೇಂದ್ರ ಮತ್ತು ನಾಲ್ಕು ರಾಜ್ಯಗಳಿಗೆ ನೋಟಿಸ್ ನೀಡಿದೆ. ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ನ್ಯಾಯಮೂರ್ತಿ ಕೆ.ವಿನೋದ್ ಚಂದ್ರನ್ ಅವರ ನ್ಯಾಯಪೀಠ, ಪ್ರವಾಹ ಮತ್ತು ಅಕ್ರಮ ಮರ ಕಡಿಯುವಿಕೆಯನ್ನು ಸ್ವಯಂಪ್ರೇರಿತವಾಗಿ ಪರಿಗಣಿಸಿ, ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯನ್ನು ಸಮತೋಲನಗೊಳಿಸಬೇಕು ಎಂದು ಒತ್ತಿಹೇಳಿದೆ.

"ನಾವು ಅಭೂತಪೂರ್ವ ಮಳೆ ಮತ್ತು ಪ್ರವಾಹವನ್ನು ನೋಡಿದ್ದೇವೆ. ಪ್ರವಾಹ ನಿಯಂತ್ರಿಸಲಾಗದಿರುವ ಸಂಬಂಧ ಪಂಜಾಬ್, ಉತ್ತರಾಖಂಡ, ಹಿಮಾಚಲ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ ರಾಜ್ಯಗಳಿಗೆ ನೋಟಿಸ್ ನೀಡುತ್ತಿದ್ದೇವೆ. ಮೇಲ್ನೋಟಕ್ಕೆ ಅಕ್ರಮವಾಗಿ ಮರಗಳನ್ನು ಕಡಿಯಲಾಗಿದೆ ಎಂದು ಕಾಣುತ್ತಿದೆ," ಎಂದು ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಹೇಳಿದ್ದಾರೆ. ಜತೆಗೆ "ಇದು ಬಹಳ ಗಂಭೀರ ವಿಷಯವೆಂದು ಕಂಡುಬರುತ್ತಿದೆ," ಎಂದು ಉಲ್ಲೇಖಿಸಿದ್ದಾರೆ.

"ಪಂಜಾಬ್ ನ ಸಂಪೂರ್ಣ ಹೊಲಗಳು ಮತ್ತು ಗ್ರಾಮಗಳು ಪ್ರವಾಹದಿಂದ ಅಳಿಸಿಹೋಗಿವೆ. ಇದನ್ನು ತಡೆಯಬೇಕಾದರೆ ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯನ್ನು ಸಮತೋಲನಗೊಳಿಸಬೇಕಾಗಿದೆ," ಎಂದು ಅವರು ಒತ್ತಿ ಹೇಳಿದ್ದಾರೆ.

ಹಿಮಾಚಲ ಪ್ರದೇಶದ ನದಿಗಳಲ್ಲಿ ಹೆಚ್ಚಿನ ಸಂಖ್ಯೆಯ ಮರದ ತುಂಡುಗಳು ತೇಲುತ್ತಿವೆ ಎಂದು ಮಾಧ್ಯಮ ವರದಿಗಳನ್ನು ಉಲ್ಲೇಖಿಸಿರುವ ನ್ಯಾಯಾಲಯ, ಈ ಸಮಸ್ಯೆಯನ್ನು ಪರಿಹರಿಸಲು ಸೂಚನೆಗಳನ್ನು ಪಡೆಯುವಂತೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರಿಗೆ ಸೂಚಿಸಿದೆ. ಜತೆಗೆ ನೋಟಿಸ್ ಗೆ ಮೂರು ವಾರಗಳಲ್ಲಿ ಉತ್ತರಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

# ಜಾಗತಿಕ ಮಾದರಿಯ ಏಕರೂಪ ಜಿಎಸ್‌ಟಿಗೆ ಗೃಹ ಸಚಿವ ಪರಮೇಶ್ವರ್ ಆಗ್ರಹ

**ಬೆಂಗಳೂರು, ಸೆ 4–** ಜೀವನಾವಶ್ಯಕ ವಸ್ತುಗಳ ಮೇಲಿನ ತೆರಿಗೆಯನ್ನು ಕಡಿಮೆ ಮಾಡುವ ಮೂಲಕ, ಜಾಗತಿಕ ಮಾದರಿಯ ಆಧಾರದಲ್ಲಿ ಏಕರೂಪ ಜಿಎಸ್ಟಿಯನ್ನು ಜಾರಿಗೊಳಿಸುವ ಅಗತ್ಯವಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮಲ್ಲಿ ದೈನಂದಿನ ಬಳಕೆಯ ಸರಕು ಮತ್ತು ಸೇವೆಗಳಿಗೆ ಶೇ.18, 22, 28ರಷ್ಟು ತೆರಿಗೆ ವಿಧಿಸಲಾಗಿದೆ. ಅದನ್ನು ಕಡಿಮೆ ಮಾಡಬೇಕು. ಎಲ್ಲಾ ಪದಾರ್ಥಗಳ ಮೇಲೂ ಶೇ. 5ರಿಂದ 6ರ ಒಳಗೆ ಜಿಎಸ್ಟಿ ಮಿತಿಗೊಳಿಸಬೇಕು. ಜನಸಾಮಾನ್ಯರ ಬಳಕೆಯ ವಸ್ತುಗಳಿಗೆ ಜಿಎಸ್ಟಿ ವಿನಾಯಿತಿ ನೀಡಬೇಕೆಂದು ಆಗ್ರಹಿಸಿದರು.

ಜಿಎಸ್ಟಿ ಕಡಿಮೆ ಮಾಡುವಂತೆ ಕಾಂಗ್ರೆಸ್ ಪಕ್ಷ ಸದನದ ಹೊರಗೆ ಮತ್ತು ಒಳಗೆ ಆಗ್ರಹಿಸಿತ್ತು. ಕೇಂದ್ರ ಸರ್ಕಾರಕ್ಕೆ ಈಗ ಅರಿವಾದಂತಿದೆ. ಕೆಲ ವಸ್ತುಗಳ ಮೇಲೆ ತೆರಿಗೆ ಕಡಿತ ಮಾಡಿರುವುದನ್ನು ನಾನು ಸ್ವಾಗತಿಸುತ್ತೇನೆ ಎಂದರು. ಬೇರೆ ಬೇರೆ ದೇಶಗಳಲ್ಲಿರುವ ಜಿಎಸ್ಟಿ ತೆರಿಗೆ ಪ್ರಮಾಣವನ್ನು ಗಣನೆಗೆ ತೆಗೆದುಕೊಳ್ಳಬೇಕು. ಬಹುತೇಕ ದೇಶಗಳಲ್ಲಿ ಶೇ. 10ಕ್ಕಿಂತ ಹೆಚ್ಚಿನ ತೆರಿಗೆಯಿಲ್ಲ. ಆದರೆ ನಮ್ಮಲ್ಲಿ ಶೇ.28ರ ವರೆಗೂ ದುಬಾರಿಯಾಗಿದೆ ಎಂದರು.

ಅಭಿವೃದ್ಧಿ ಕಾರ್ಯಗಳಿಗೆ ಹಣ ಬೇಕು. ಆ ಸಂಪನೂಲವನ್ನು ಎಲ್ಲಿಂದ ಕ್ರೋಡೀಕರಿಸಬೇಕು ಎಂಬುದನ್ನು ಹಣಕಾಸು ಇಲಾಖೆ ಪರಿಶೀಲನೆ ಮಾಡಬೇಕು. ದೇಶದಲ್ಲೆ ಕರ್ನಾಟಕ ಅತೀ ಹೆಚ್ಚು ತೆರಿಗೆ ಪಾವತಿಸುವ ರಾಜ್ಯವಾಗಿದೆ. ಪ್ರತಿ ತಿಂಗಳು ಸುಮಾರು 12 ಸಾವಿರ ಕೋಟಿ ರೂ.ಗಳಷ್ಟು ಪಾವತಿಸುತ್ತಿದ್ದೇವೆ. ತೆರಿಗೆ ಕಡಿಮೆ ಮಾಡುವುದರಿಂದ ರಾಜ್ಯ ಸರ್ಕಾರಗಳಿಗೂ ನಷ್ಟವಾಗಬಹುದು. ಅದನ್ನು ಭರಿಸಲು ಕೇಂದ್ರ ಸರ್ಕಾರ ಕ್ರಮಕೈಗೊಳ್ಳಬೇಕು ಮತ್ತು ವಿವಿಧ ಇಲಾಖೆಗಳಿಗೆ ಹಂಚಿಕೆಯಾಗಿರುವ ಅನುದಾನವನ್ನು ಕಡಿಮೆ ಮಾಡಬಾರದು ಎಂದು ಒತ್ತಾಯಿಸಿದರು.

ಶಾಸಕ ಕೆ.ಎನ್.ರಾಜಣ್ಣ ಕಾಂಗ್ರೆಸ್ ಬಿಡುತ್ತೇನೆ ಎಂದು ಎಲ್ಲಿಯೂ ಹೇಳಿಲ್ಲ. ಅವರು ಪಕ್ಷವನ್ನು ಬಿಡುವುದೂ ಇಲ್ಲ. ಅನಗತ್ಯವಾಗಿ ಸೃಷ್ಟಿಸಲಾದ ವಿಚಾರಗಳನ್ನು ಮುಂದಿಟ್ಟುಕೊಂಡು ಮಾತ



ನಾಡುವುದು ಸರಿಯಲ್ಲ ಎಂದು ಟೀಕಕಾರರಿಗೆ ತಿರುಗೇಟು ನೀಡಿದರು. ರಾಜಕಾರಣದಲ್ಲಿ ಟೀಕೆ ಟಿಪ್ಪಣಿಗಳು ಸಹಜ. ಒಳ್ಳೆಯದು, ಕೆಟ್ಟದ್ದು ಎರಡನ್ನೂ ಮಾತನಾಡುತ್ತಾರೆ. ರಾಜಣ್ಣ ನನ್ನ ವಿರುದ್ಧ ಮಾತನಾಡಿರಬಹುದು, ಅದು ಸಮಯ ಸಂದರ್ಭ ಅನುಸಾರ ಆಗಿರುತ್ತದೆ. ಅದರ ಬಗ್ಗೆ ಹೆಚ್ಚಿನ ಗಮನ ನೀಡುವುದಿಲ್ಲ. ರಾಜಣ್ಣ ನಮ ಜಿಲ್ಲೆಯವರು. ನನಗೆ ಆತ್ಮಿಯ ಸ್ನೆಹಿತ. ನಾನು ಮತ್ತು ಅವರು ಪಿಯುಸಿಯಲ್ಲಿ ತುಮಕೂರಿನ ಸರ್ಕಾರಿ ಕಾಲೇಜಿನಲ್ಲಿ ಒಂದೇ ತರಗತಿಯಲ್ಲಿದ್ದವರು ಎಂದು ಹೇಳಿದರು.

ಸಂಪುಟದಿಂದ ಕೈ ಬಿಟ್ಟ ಬಳಿಕವೂ ರಾಜಣ್ಣ ಕಾಂಗ್ರೆಸ್ ತೊರೆಯುತ್ತೇನೆಂದು ಎಂದು ಹೇಳಿಲ್ಲ. ಅವರ ವಿಚಾರದಲ್ಲಿ ಸೃಷ್ಟಿಸಿಕೊಂಡು ಮಾತನಾಡುವುದು ಒಳ್ಳೆಯದಲ್ಲ ಎಂದರು.ಅಪೆಕ್ ಬ್ಯಾಂಕ್ ಅಧ್ಯಕ್ಷ ಸ್ಥಾನದ ವಿಚಾರದಲ್ಲಿ ರಾಜಣ್ಣ ಸಚಿವರಾಗಿದ್ದಾಗ ಪಕ್ಷ ನಿಷ್ಠೆ ಮರೆತರು ಎಂಬುದು ಸರಿಯಲ್ಲ. ಈ ರೀತಿಯ ಆರೋಪಗಳಿಗೆ ಸೂಕ್ತ ಪುರಾವೆಗಳು ಬೇಕು. ಹೇಳಿಕೆಗಳಿಗೋಸ್ಕರ ಹೇಳಿಕೆ ನೀಡುವುದು ಸರಿಯಲ್ಲ. ರಾಜಣ್ಣ ಪಕ್ಷ ಬಿಡುವುದಿಲ್ಲ, ಬ್ರೈನ್ ಮ್ಯಾಪಿಂಗ್ ಸೇರಿದಂತೆ ಯಾವುದೇ ವಿಚಾರಗಳು ಇದ್ದರೆ, ಆರೋಪ ಮಾಡಿದವರೇ ಪ್ರತಿಕ್ರಿಯಿಸಬೇಕು. ರಾಜಣ್ಣ ಒಂಟಿಯಲ್ಲ, ಕಾಂಗ್ರೆಸ್ ಅವರ ಜೊತೆಗಿದೆ ಎಂದರು.

# ಕ್ರಿಕೆಟಿಗ ಶಿಖರ್ ಧವನ್‌ಗೆ ಇಡಿ ಸಮನ್ಸ್



**ನವದೆಹಲಿ, ಸೆ.4–** ಬೆಟ್ಟಿಂಗ್ ಅಪ್‌ಗೆ ಸಂಬಂಧಿಸಿದ ಹಣ ವರ್ಗಾವಣೆ ವಿಚಾರದಲ್ಲಿ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ. ಭಾರತದ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರನ್ನು ಅಕ್ರಮ ಬೆಟ್ಟಿಂಗ್ ಅಪ್‌ಗೆ ಸಂಬಂಧಿಸಿದ ಹಣ ವರ್ಗಾವಣೆ ತನಿಖೆಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಲಾಗಿದೆ ಎಂದು ಉನ್ನತ ಮೂಲಗಳು ಪಿಟಿಐಗೆ ತಿಳಿಸಿವೆ.

ಅಕ್ರಮ ಬೆಟ್ಟಿಂಗ್ ಅಪ್‌ಗೆ ಸಂಬಂಧಿಸಿದ ಈ ತನಿಖೆಯ ಭಾಗವಾಗಿ, ಕೇಂದ್ರ ತನಿಖಾ ಸಂಸ್ಥೆ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಶಿಖರ್ ಧವನ್ ಅವರ ಹೇಳಿಕೆಯನ್ನು ದಾಖಲಿಸಲಿದೆ ಎಂದು ವರದಿ ಸೇರಿಸಲಾಗಿದೆ. 39 ವರ್ಷದ ಭಾರತದ ಮಾಜಿ ಕ್ರಿಕೆಟಿಗ ಕೆಲವು ಅನುಮೋದನೆಗಳ ಮೂಲಕ ಅಪ್‌ಗೆ ಸಂಪರ್ಕ ಹೊಂದಿದ್ದಾರೆಂದು ತಿಳಿದುಬಂದಿದೆ. ವಿಚಾರಣೆಯ ಸಮಯದಲ್ಲಿ ಈ ಪ್‌ನೊಂದಿಗೆ ಅವರ ಸಂಪರ್ಕವನ್ನು ಅರ್ಥಮಾಡಿಕೊಳ್ಳಲು ಬಯಸುತ್ತದೆ.ಅಕ್ರಮ ಬೆಟ್ಟಿಂಗ್ ಅಪ್ಲಿಕೇಶನ್‌ಗಳು ಕೋಟ್ಯಂತರ ರೂಪಾಯಿ ಮೌಲ್ಯದ ಹಲವಾರು ಜನರನ್ನು ಮತ್ತು ಹೂಡಿಕೆದಾರರನ್ನು ವಂಚಿಸಿದೆ ಅಥವಾ ಭಾರಿ ಪ್ರಮಾಣದ ತೆರಿಗೆಯನ್ನು ತಪ್ಪಿಸಿದೆ ಎಂದು ಹೇಳಲಾದ ಹಲವಾರು ಪ್ರಕರಣಗಳನ್ನು ತನಿಖಾ ಸಂಸ್ಥೆ ತನಿಖೆ ನಡೆಸುತ್ತಿದೆ.

ಕಳೆದ ತಿಂಗಳು, ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಅವರನ್ನು ಫೆಡರಲ್ ತನಿಖಾ ಸಂಸ್ಥೆ ಈ ಪ್ರಕರಣದಲ್ಲಿ ಪ್ರಶ್ನಿಸಿತ್ತು. ಕೇಂದ್ರ ಸರ್ಕಾರವು ಇತ್ತೀಚೆಗೆ ಒಂದು ಕಾನೂನನ್ನು ತರುವ ಮೂಲಕ ರಿಯಲ್–ಮನಿ ಆನ್‌ಲೈನ್ ಗೇಮಿಂಗ್ ಅನ್ನು ನಿಷೇಧಿಸಿದೆ.

# ಜಿಎಸ್‌ಟಿ ಸರಳೀಕರಣ: ಎಚ್‌ಡಿಕೆ ಹರ್ಷ



**ಬೆಂಗಳೂರು,ಸೆ.4–**ಜಿಎಸ್‌ಟಿ ವ್ಯವಸ್ಥೆಯನ್ನು ಸರಳಗೊಳಿಸಿ 2 ಸ್ಲ್ಯಾಬ್‌ಗಳ ಜಿಎಸ್‌ಟಿಯನ್ನು ಜಾರಿಗೊಳಿಸುವ ಕೇಂದ್ರ ಸರ್ಕಾರದ ತೀರ್ಮಾನಕ್ಕೆ ಹರ್ಷ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ, ವ್ಯವಸ್ಥೆಯನ್ನು ಸರಳಗೊಳಿಸಿ ಮತ್ತಷ್ಟು ಸುಲಭಗೊಳಿಸುವ ಮತ್ತು ಭಾರತದಾದ್ಯಂತ ಪ್ರತಿ ಮನೆಗೂ ಸಂತೋಷ ಉಂಟು ಮಾಡುವ ನೈಜ ಜನ ಕೇಂದ್ರಿತ ಸುಧಾರಣೆ ಇದಾಗಿದೆ ಎಂದಿದ್ದಾರೆ.

ಕೇಂದ್ರದ ನರೇಂದ್ರಮೋದಿ ನೇತೃತ್ವದ ಸರ್ಕಾರ ಜಿಎಸ್‌ಟಿ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ಜಾರಿಗೆ ತಂದಿದ್ದು, ರಾಷ್ಟ್ರಕ್ಕೆ ಐತಿಹಾಸಿಕ ದೀಪವಳಿ ಉಡುಗೊರೆ ನೀಡಿದೆ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರ್ ಭಾರತ್‌ನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಅವರು ಬಣ್ಣಿಸಿದ್ದಾರೆ.

ಜಿಎಸ್‌ಟಿ ಈಗ ಕೇವಲ 2 ಸ್ಲ್ಯಾಬ್ ಹೊಂದಿದ್ದು, ದೈನಂದಿನ ಅಗತ್ಯ ವಸ್ತುಗಳು ಆರೋಗ್ಯ ರಕ್ಷಣೆ, ಶಿಕ್ಷಣ, ಕೃಷಿ ಮತ್ತು ವಾಹನಗಳೂ ಸಹ ಸುಲಭವಾಗಿ ಕೈಗೆಟಕುವಂತಾಗುತ್ತವೆ. ಜತೆಗೆ ಉದ್ಯಮಗಳು ಹಾಗೂ ಸಣ್ಣ ಮತ್ತು ಮಧ್ಯಮ ಗಾತ್ರದ ಕೈಗಾರಿಕೆಗಳು ಭಾರಿ ಉತ್ತೇಜನವನ್ನೂ ಪಡೆಯುತ್ತವೆ ಎಂದು ಅವರು ತಿಳಿಸಿದ್ದಾರೆ.

# ಪೊಲೀಸ್ ಠಾಣೆಗಳಲ್ಲಿ ಸಿಸಿಟಿವಿ ನಿಷ್ಕ್ರಿಯ ಸುಪ್ರೀಂ ಸ್ವಯಂ ಪ್ರೇರಿತ ಪಿಐಎಲ್ ದಾಖಲಿಸಿದ ಸುಪ್ರೀಂ

**ನವದೆಹಲಿ, ಸೆ. 4–** ದೇಶದಾದ್ಯಂತ ಪೊಲೀಸ್ ಠಾಣೆಗಳಲ್ಲಿ ಕ್ರಿಯಾತ್ಮಕ ಸಿಸಿಟಿವಿ ಕ್ಯಾಮೆರಾಗಳ ಅನುಪಸ್ಥಿತಿಯನ್ನು ಬಿಂಬಿಸುವ ಪತ್ರಿಕೆ ವರದಿಯ ನಂತರ ಎಚ್ಚೆತ್ತಿರುವ ಸುಪ್ರೀಂ ಕೋರ್ಟ್ ಗುರುವಾರ ಸ್ವಯಂಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯನ್ನು (ಪಿಐಎಲ್) ದಾಖಲಿಸಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಸಂದೀಪ್ ಮೆಹ್ತಾ ಅವರನ್ನೊಳಗೊಂಡ ನ್ಯಾಯಪೀಠ, 2025ರಲ್ಲಿ ಕಳೆದ 7–8 ತಿಂಗಳಲ್ಲಿ ರಾಜಸ್ಥಾನದಲ್ಲಿ ಮಾತ್ರ ಪೊಲೀಸ್ ಕಸ್ಟಡಿಯಲ್ಲಿ 11 ಸಾವುಗಳು ವರದಿಯಾಗಿವೆ ಎಂದು ಗಮನಿಸಿದೆ. ಇದಕ್ಕೆ ಕಾರಣ ತಿಳಿಯಲು ಸುಪ್ರೀಂ ಕೋರ್ಟ್ ಮುಂದಾಗಿದೆ.

ಸಿಸಿಟಿವಿ ಅಳವಡಿಕೆ 2020ರಿಂದ ಕಡ್ಡಾಯ : 2020ರಲ್ಲಿ ಸುಪ್ರೀಂ ಕೋರ್ಟ್ ದೇಶಾದ್ಯಂತ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ರಾತ್ರಿ ಹೊತ್ತಿನ ದೃಶ್ಯಾವಳಿ ಮತ್ತು ಆಡಿಯೊ ಸಾಮರ್ಥ್ಯವಿರುವ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವುದನ್ನು ಕಡ್ಡಾಯಗೊಳಿಸಿದೆ. ಈ ಐತಿಹಾಸಿಕ ತೀರ್ಪಿನಲ್ಲಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ ಸರ್ಕಾರಗಳು ಲಾಕಪ್ ಗಳು ಮತ್ತು ವಿಚಾರಣಾ ಕೊಠಡಿಗಳು ಸೇರಿ ಪೊಲೀಸ್ ಆವರಣದೊಳಗಿನ ಎಲ್ಲಾ ನಿರ್ಣಾಯಕ ಸ್ಥಳಗಳಲ್ಲಿ ಕ್ರಿಯಾತ್ಮಕ ಸಿಸಿಟಿವಿ ವ್ಯಾಪ್ತಿಯನ್ನು ಖಚಿತಪಡಿಸಿಕೊಳ್ಳಬೇಕಿದೆ.

ಕಸ್ಟಡಿ ಚಿತ್ರಹಿಂಸೆ ಅಥವಾ ಸಾವುಗಳಿಗೆ ಸಂಬಂಧಿಸಿದ ತನಿಖೆಯ ಸಮಯದಲ್ಲಿನ ತುಣುಕನ್ನು ಕನಿಷ್ಠ 18 ತಿಂಗಳವರೆಗೆ ಸಂರಕ್ಷಿಸಬೇಕು ಮತ್ತು ಲಭ್ಯವಾಗುವಂತೆ ಮಾಡಬೇಕು ಎಂದು ನ್ಯಾಯಾಲಯ ಒತ್ತಿಹೇಳಿದೆ.

ನಿರಂತರ ಅನುಸರಣೆ ಮತ್ತು ಸವಾಲುಗಳು: ಸ್ಪಷ್ಟ ನಿರ್ದೇಶನಗಳ ಹೊರತಾಗಿಯೂ ಅನೇಕ ಪೊಲೀಸ್ ಠಾಣೆಗಳು ಕ್ರಿಯಾತ್ಮಕ ಸಿಸಿಟಿವಿ ಕ್ಯಾಮೆರಾಗಳ ಕೊರತೆಯನ್ನು ಎದುರಿಸುತ್ತಿವೆ ಅಥವಾ ದೃಶ್ಯಾವಳಿಗಳು ಕಾಣೆಯಾಗಿವೆ. ಇದು ಆಗಾಗ್ಗೆ ತನಿಖೆ ಮತ್ತು ಉತ್ತರದಾಯಿತ್ವಕ್ಕೆ ಅಡ್ಡಿಯಾಗಿದೆ.

ಪೊಲೀಸ್ ಇಲಾಖೆಗಳು ಆಗಾಗ್ಗೆ ತಾಂತ್ರಿಕ ಸಮಸ್ಯೆಗಳು ಅಥವಾ



ತುಣುಕುಗಳ ಅಲಭ್ಯತೆಯನ್ನು ಕಸ್ಟಡಿ ದುರುಪಯೋಗವನ್ನು ಒಳಗೊಂಡ ಪ್ರಕರಣಗಳಲ್ಲಿ ಉಲ್ಲೇಖಿಸಿವೆ. ಈಗ ಸುಪ್ರೀಂ ಕೋರ್ಟ್ ನ ಈ ಸ್ವಯಂಪ್ರೇರಿತ ಕ್ರಮವು ಪೊಲೀಸ್ ಠಾಣೆಗಳಲ್ಲಿನ ಕಾರ್ಯತಂತ್ರವನ್ನು ನಿರ್ಬಂಧ ಹೇರಲಿದೆ.

ಮೇಲ್ವಿಚಾರಣೆ ಮತ್ತು ಪರಿಹಾರ ಕಾರ್ಯವಿಧಾನಗಳು: ಸಿಸಿಟಿವಿ ವ್ಯವಸ್ಥೆಗಳ ಸಂಗ್ರಹಣೆ, ಅವಳವಡಿಕೆ ಮತ್ತು ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ರಾಜ್ಯ ಮತ್ತು ಕೇಂದ್ರ ಮೇಲ್ವಿಚಾರಣಾ ಸಮಿತಿಗಳ ಪಾತ್ರವನ್ನು ನ್ಯಾಯಾಲಯ ಬಂಬಿಸಿದೆ. ಗಂಭೀರ ಗಾಯಗಳು ಅಥವಾ ಕಸ್ಟಡಿ ಸಾವುಗಳನ್ನು ಒಳಗೊಂಡ ಪ್ರಕರಣಗಳಲ್ಲಿ ಸಂತ್ರಸ್ತರು ಅಥವಾ ಅವರ ಕುಟುಂಬಗಳು ಮಾನವ ಹಕ್ಕುಗಳ ಆಯೋಗಗಳು ಅಥವಾ ನ್ಯಾಯಾಲಯಗಳನ್ನು ಸಂಪರ್ಕಿಸಬಹುದು. ಅವು ತನಿಖೆ ಮತ್ತು ಸಾಕ್ಷ್ಯ ಸಂರಕ್ಷಣೆಗಾಗಿ ಸಿಸಿಟಿವಿ ದೃಶ್ಯಾವಳಿಗಳನ್ನು ಕೇಳುವ ಅಧಿಕಾರವನ್ನು ಹೊಂದಿವೆ ಎಂದು ಅದು ನಿರ್ದೇಶಿಸಿದೆ.

ಪೊಲೀಸ್ ಠಾಣೆಗಳಲ್ಲಿ ಸಿಸಿಟಿವಿ ಅಳವಡಿಕೆಯ ಬಗ್ಗೆ ಅಸ್ತಿತ್ವದಲ್ಲಿರುವ ಕಾನೂನುಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಆಗ್ರಹಿಸಲು ಈ ಸ್ವಯಂಪ್ರೇರಿತ ಪಿಐಎಲ್ ದಾಖಲಿಸಲಾಗಿದೆ. ಪಾರದರ್ಶಕತೆಯನ್ನು ಹೆಚ್ಚಿಸುವ ಮತ್ತು ಕಸ್ಟಡಿ ದುರುಪಯೋಗವನ್ನು ತಡೆಗಟ್ಟುವ ಗುರಿಯನ್ನು ಇದು ಹೊಂದಿದೆ.

# ಸರ್ಕಾರದಿಂದ ಪರಿಶಿಷ್ಟರ ಹಣ ದುರ್ಬಳಕೆ : ಅಶೋಕ್ ವಾಗ್ದಾಳಿ

**ಬೆಂಗಳೂರು, ಸೆ.4–** ಮುಖ್ಯಮಂತ್ರಿ ಸಿದ್ದರಾಮಯ್ಯನವರೇ, ತಾವು ಮತ್ತು ತಮ ಪಟಾಲಂ ಇನ್ನು ಮುಂದೆ ಎಂದಿಗೂ ಸಾಮಾಜಿಕ ನ್ಯಾಯದ ಬಗ್ಗೆ ಬುರುಡೆ ಭಾಷಣ ಮಾಡಿ ಬುದ್ಧ, ಬಸವ, ಅಂಬೇಡ್ಕರರಿಗೆ ಅವಮಾನ ಮಾಡಬೇಡಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಸರ್ಕಾರದ ವಿರುದ್ದ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ತಮ ಅಧಿಕೃತ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ದಲಿತರು, ಹಿಂದುಳಿದ ವರ್ಗಗಳ ಜನರನ್ನು ವೋಟ್ ಬ್ಯಾಂಕ್ ಮಾಡಿಕೊಂಡು ಮೋಸ ಮಾಡಬೇಡಿ ಎಂದು ಕಿಡಿಕಾರಿದ್ದಾರೆ.

ಒಂದು ಕಡೆ ಹಿಂದುಳಿದ ವರ್ಗಗಳ ವಿವಿಧ ಅಭಿವೃದ್ಧಿ ನಿಗಮಗಳಿಗೆ ನೂರಾರು ಕೋಟಿ ಅನುದಾನ ಕಡಿತ ಮಾಡಿದ್ದೀರಿ, ಮತ್ತೊಂದು ಕಡೆ ಮೀಸಲಿಟ್ಟಿರುವ ಹಣವನ್ನು ಸರಿಯಾಗಿ ಖರ್ಚು ಮಾಡಿಲ್ಲ. ಇದೇನಾ ಸ್ವಾಮಿ ನಿಮ ಸಾಮಾಜಿಕ ನ್ಯಾಯ ಕಾಂಗ್ರೆಸ್ ಸರ್ಕಾರಕ್ಕೆ ನಾಚಿಕೆಯಾಗಬೇಕು ಎಂದು ಆಕ್ರೊ?ಶ ಹೊರಹಾಕಿದ್ದಾರೆ.

ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ವಿನಿಯೋಗವಾಗಬೇಕಾಗಿದ್ದ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಹಣವನ್ನ ಲಪಟಾಯಿಸಿದ್ದಾಯ್ತು. ಎಸ್‌ಸಿಎಸ್?ಪಿ–ಟಿಎಸ್‌ಪಿ ಹಣದಲ್ಲಿ ಪ್ರತಿ ವರ್ಷ ಬರೋಬ್ಬರಿ 15 ಸಾವಿರ ಕೋಟಿ ರೂಪಾಯಿ ಹಣವನ್ನ ಬೇರೆಡೆ ವರ್ಗಾಯಿಸಿ ದುರ್ಬಳಕೆ ಮಾಡಿದ್ದಾಯ್ತು. ಈಗ ಹಿಂದುಳಿದ ಸಮುದಾಯಗಳ ಅಭಿವೃದ್ಧಿ ನಿಗಮಗಳ ಅಹಿಂದ ನಿಗಮಗಳ ಅನುದಾನ ಖೋತಾ, ಡೋಂಗಿ ಸಮಾಜವಾದಿಗಳ ಸಾಮಾಜಿಕ ನ್ಯಾಯ ಭಾಷಣಕ್ಕೆ ಮಾತ್ರ ಸೀಮಿತ! ಸಿಎಂ ಸಿದ್ದರಾಮಯ್ಯನವರೇ, ತಮ ಸರ್ಕಾರ ಬಂದಾಗಿನಿಂದ ಕಳೆದ ಎರಡು ವರ್ಷಗಳಲ್ಲಿ ಹಿಂದುಳಿದ ಸಮುದಾಯಗಳಿಗೆ ಮಾಡಿರುವ ದೊಡ್ಡ ಉಪಕಾರದ ಬಗ್ಗೆ ಓದಿಕೊಳ್ಳಿ ಎಂದು ವ್ಯಂಗ್ಯವಾಡಿದ್ದಾರೆ.

ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅನುದಾನದಲ್ಲಿ 90 ಕೋಟಿ ರೂ. ಅನುದಾನ ಕಡಿತ, ವಿಶ್ವಕರ್ಮ ನಿಗಮಕ್ಕೆ 12 ಕೋಟಿ ಅನುದಾನ ಕಡಿತ, ಉಪ್ಪಾರ ನಿಗಮಕ್ಕೆ 7 ಕೋಟಿ ಅನುದಾನ ಕಡಿತ, ಅಂಬಿಗರ ಚೌಡಯ್ಯ ನಿಗಮಕ್ಕೆ 16 ಕೋಟಿ ರೂ. ಕಡಿತ, ಸವಿತಾ ಸಮಾಜಕ್ಕೆ 5 ಕೋಟಿ ಅನುದಾನ ಕಡಿತ ನೋಡಿದರೆ ಪ್ರತಿ ವರ್ಷ ನೂರಾರು ಕೋಟಿ ಅನುದಾನ ಕಡಿತವಾಗಿದೆ ಎಂದು ಅವರು ಸರ್ಕಾರದ ಗಮನಸೆಳೆದಿದ್ದಾರೆ.

# ಸೆಪ್ಟೆಂಬರ್ 6ರಂದು ಶಿಕ್ಷಕರ ದಿನಾಚರಣೆ:ಪ್ರಶಸ್ತಿ ಪ್ರದಾನ

**ರಾಯಚೂರು,ಸೆ.4**–ಶಾಲಾ ಶಿಕ್ಷಣ ಇಲಾಖೆಯಿಂದ 2025-26ನೇ ಸಾಲಿನ ರಾಯಚೂರು ಜಿಲ್ಲಾ ಹಾಗೂ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭವು ಸೆಪ್ಟೆಂಬರ್ 6ರ ಬೆಳಿಗ್ಗೆ 10.30ಕ್ಕೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರ ಹಮ್ಮಿಕೊಳ್ಳಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

**ಕಿರಿಯ ಪ್ರಾಥಮಿಕ ಶಾಲಾ ವಿಭಾಗ:** ಈ ವಿಭಾಗದಲ್ಲಿ ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮದ ಸರಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಶ್ರೀಮತಿ ಉಮ್ಮಿ ಸಲ್ಮಾ, ದೇವದುರ್ಗದ ದರ್ಬಾರ ಓಣಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಗೋವಿಂದರಾಜ, ಲಿಂಗಸೂಗುರು ತಾಲೂಕಿನ ಹುಲಿಗುಡ್ಡ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಸಹ ಶಿಕ್ಷಕರಾದ ಶಿವಯೋಗಿ ಗುಂಜುಟಗಿ, ಮಾನವಿ ತಾಲೂಕಿನ ಲಕ್ಕಂದಿನ್ನಿ ಗ್ರಾಮದ ಅಂಬೇಡ್ಕರನಗರ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾದ ಗುರುಮೂರ್ತಿ ಎಂ.ಜಿ., ರಾಯಚೂರು ತಾಲೂಕಿನ ಕೊರತೀಪ್ಲಿ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಸುಖಲತಾ ಅವರು ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಹಿರಿಯ ಪ್ರಾಥಮಿಕ ಶಾಲಾ ವಿಭಾಗ: ಈ ವಿಭಾಗದಲ್ಲಿ ಲಿಂಗಸೂಗೂರು ತಾಲೂಕಿನ ಹೂವಿನಬಾವಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾದ ಅಮರೇಗೌಡ ಮಾಲಿಪಾಟೀಲ, ಮಾನವಿ ತಾಲೂಕಿನ ಕವಿತಾಳ ಗ್ರಾಮದ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಶ್ರೀಮತಿ ಹಲಿಯಾಬೇಗಂ, ಮಾನವಿ ತಾಲೂಕಿನ ರಾಜೋಳ್ಳಿ ಗ್ರಾಮದ ಸರ್ಕಾರಿ ಉನ್ನತೀಕರಿಸದ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾದ ಅನ್ವರ, ಸಿಂಧನೂರು ತಾಲೂಕಿನ ಚನ್ನಳ್ಳಿ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಹಿರಿಯ ಮುಖ್ಯೋಪಾಧ್ಯಾಯರಾದ ಅನಂತರಾವ್, ರಾಯಚೂರು ತಾಲೂಕಿನ ಯಕ್ಲಾಸಪೂರಿನ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಶ್ರೀಮತಿ ನರಸುಬಾಯಿ ಅವರು ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಪ್ರೌಢಶಾಲಾ ವಿಭಾಗ: ಈ ವಿಭಾಗದಲ್ಲಿ ದೇವದುರ್ಗ ತಾಲೂಕಿನ ಗಾಣಧಾಳ ಗ್ರಾಮದ ಸರಕಾರಿ ಪ್ರೌಢಶಾಲೆಯ ಸಹ ಶಿಕ್ಷಕರಾದ ಗೋವಿಂದ, ಲಿಂಗಸುಗೂರು ತಾಲೂಕಿನ ಮುದಗಲ್ ಗ್ರಾಮದ ಬಾಲಕಿಯರ ಸರಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕರಾದ ಅಮರೇಗೌಡ ಅಗಸಿಮುಂದಿನ, ಮಾನವಿ ತಾಲೂಕಿನ ಕೋನಾಪೂರಪೇಟ ಗ್ರಾಮದ ಸರಕಾರಿ ಪ್ರೌಢಶಾಲೆಯ ಸಹ ಶಿಕ್ಷಕರಾದ ಸಂಜೀವಪ್ಪ ಕೆ., ಸಿಂಧನೂರು ತಾಲೂಕಿನ ತಿಡಿಗೋಳ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕರಾದ ನಾಗಪ್ಪ, ರಾಯಚೂರು ತಾಲೂಕಿನ ಗುಂಜಳ್ಳಿ ಗ್ರಾಮದ ಸರಕಾರಿ ಪ್ರೌಢಶಾಲೆಯ ಚಿತ್ರಕಲಾ ಶಿಕ್ಷಕಿ ಶ್ರೀಮತಿ ರಾಧಾ ಕೆ. ಅವರು ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಆಯ್ಕೆಯಾದ ಎಲ್ಲ ಶಿಕ್ಷಕರಿಗೆ ವಿವಿಧ ಗಣ್ಯರಿಂದ ಸನ್ಮಾನಿಸಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಆಡಳಿತ ವಿಭಾಗದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಘು ಮೋಟಾರ್ ಡ್ರೈವಿಂಗ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು,ಸೆ.4**–ಇಲ್ಲಿನ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025-26ನೇ ಸಾಲಿಗೆ ಕುಶಲಕರ್ಮಿಗಳ ತರಬೇತಿ ಸಂಘಗಳ ಯೋಜನೆಯಡಿ ಜಿಲ್ಲೆಯ ಗ್ರಾಮೀಣ ಪ್ರದೇಶದ ನಿರುದ್ಯೋಗ ಯುವಕ ಯುವತಿಯರಿಗೆ ಲಘು ಮೋಟಾರ್ ಡ್ರೈವಿಂಗ್ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ್ಲ ವಿವಿಧ ತಾಲೂಕುಗಳಾದ ರಾಯಚೂರ 22, ಮಾನವಿ 18, ಸಿರವಾರ 16, ಸಿಂಧನೂರು 18, ಮಸ್ಕಿಂ 15, ಲಿಂಗಸುಗೂರು 18, ದೇವದುರ್ಗ 18 ಸೇರಿದಂತೆ ಒಟ್ಟು 125 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುವುದು.

ದಾಖಲೆಗಳು: ಜನ್ಮ ದಿನಾಂಕ ನಮೂದಿಸಿರುವ ದಾಖಲೆ (ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ). ಶೈಕ್ಷಣಿಕ ಅರ್ಹತೆ: ಕನಿಷ್ಠ 10ನೇ ತರಗತಿ ಪಾಸಾಗಿರಬೇಕು (ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ), ಜಾತಿ ಪ್ರಮಾಣ ಪತ್ರ (ಪ.ಜಾತಿ, ಪಂ.ಪಂಗಡ & ಅಲ್ಪಸಂಖ್ಯಾತರಿಗೆ ಮಾತ್ರ). ವಿಕಲಚೇತನ/ವಿಧವೆ ಪ್ರಮಾಣ ಪತ್ರ (ವಿಕಲಚೇತನ/ವಿಧವೆಯರಾಗಿದ್ದಲ್ಲಿ). ಚಾಲ್ತಿಯಲ್ಲಿರುವ ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಂದ ವಾಸಸ್ಥಳ ಪ್ರಮಾಣ ಪತ್ರ. ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರದೊಂದಿಗೆ ಕನಿಷ್ಠ 18 ವರ್ಷ ತುಂಬಿರಬೇಕು, ಗರಿಷ್ಠ 45ವರ್ಷ ಮೀರಿರಬಾರದು. ಅಂತಹ ಅಭ್ಯರ್ಥಿಗಳು ವೆಬ್‌ಸೈಟ್ ವಿಳಾಸ: www.raichur.nic.in ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ, ಉಪ ನಿರ್ದೇಶಕರು (ಗ್ರಾಮೀಣ ಕೈಗಾರಿಕೆ) ಅವರ ಕಚೇರಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಜಿಲ್ಲಾ ಪಂಚಾಯತ್, ಹೈದಾರಬಾದ ರಸ್ತೆ, ರಾಯಚೂರು ದೂರವಾಣಿ-08532-200946 ಅಥವಾ 8105044597ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿಯ ಪತ್ರಿಕಾ ವಿತರಣೆಯ ಹರಿಕಾರ ಶಾಮಚರಣ ಮಿಶ್ರಾ ಅವರ ಸಾರ್ಥಕ ಬದುಕು

**ಮಾನ್ವಿ,ಸೆ.4**–ಪತ್ರಿಕಾ ವಿತರಕರ ದಿನವನ್ನು ದೇಶಾದ್ಯಂತ ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ, ಮಾನ್ವಿ ಪಟ್ಟಣದಲ್ಲಿ ಪತ್ರಿಕಾ ವಿತರಣಾ ಕ್ಷೇತ್ರಕ್ಕೆ ಭದ್ರ ಬುನಾದಿ ಹಾಕಿದ ಶಾಮಚರಣ ಮಿಶ್ರ ಅವರ ಸೇವೆಯನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ.




1980ರ ದಶಕದಲ್ಲಿ ಮಾನ್ವಿ ಪಟ್ಟಣದಲ್ಲಿ ಪತ್ರಿಕಾ ವಿತರಕರು ಎಂದರೆ ನೆನಪಾಗುವುದು ಶಾಮಚರಣ ಮಿಶ್ರಾ ಅವರ ಹೆಸರು ಮಾತ್ರ. ಆಗಿನ ಕಾಲದಲ್ಲಿ ಮಾನ್ವಿ ಬಸ್ ನಿಲ್ದಾಣದ ಬಳಿ ಇದ್ದ ಅವರ ಸಣ್ಣ ಅಂಗಡಿಯಲ್ಲಿ ಕನ್ನಡ, ಇಂಗ್ಲಿಷ್, ತೆಲುಗು, ಹಿಂದಿ, ಮತ್ತು ಉರ್ದು ಭಾಷೆಗಳ ಎಲ್ಲ ದಿನಪತ್ರಿಕೆಗಳು, ವಾರಪತ್ರಿಕೆಗಳು ಮತ್ತು ಮಾಸಪತ್ರಿಕೆಗಳು ಸಿಗುತ್ತಿದ್ದವು. ಅಷ್ಟೇ ಅಲ್ಲದೆ, ಕಥೆ, ಕಾದಂಬರಿ, ಸಿನಿಮಾ, ಹಾಗೂ ನಾಟಕಕ್ಕೆ ಸಂಬಂಧಿಸಿದ ಪುಸ್ತಕಗಳೂ ಅವರಲ್ಲಿ ಲಭ್ಯವಿದ್ದವು. ಬಹುತೇಕ ಎಲ್ಲ ಪ್ರಮುಖ ಪತ್ರಿಕೆಗಳ ಏಜೆನ್ಸಿಗಳು ಅವರ ಬಳಿಯೇ ಇದ್ದವು.

ಆ ದಿನಗಳಲ್ಲಿ, ಮನೆ ಮನೆಗೆ ಪತ್ರಿಕೆಗಳನ್ನು ತಲುಪಿಸುವ ಕಾರ್ಯವನ್ನು ಮಿಶ್ರ ಅವರೇ ತಮ್ಮ ಸೈಕಲ್ ಮೇಲೆ ನಿರ್ವಹಿಸುತ್ತಿದ್ದರು. ತಮ್ಮ ಪ್ರಾಮಾಣಿಕತೆ, ಸರಳತೆ ಮತ್ತು ಸ್ನೇಹಪರ ಸ್ವಭಾವದಿಂದಾಗಿ ಅವರು ಪಟ್ಟಣದ ಎಲ್ಲರ ಗೌರವಕ್ಕೆ ಪಾತ್ರರಾಗಿದ್ದರು.

**ಕುಟುಂಬ ಮತ್ತು ಈಗಿನ ಬದುಕು:**

ಸುಸಂಸ್ಕೃತ ಕುಟುಂಬದವರಾದ ಶಾಮಚರಣ ಮಿಶ್ರಾ ಅವರ ಪತ್ನಿ ಲಾಜವಂತಿ, ಅವರು ಅಂಗನವಾಡಿ ಮೇಲ್ವಿಚಾರಕರಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಏಕೈಕ ಪುತ್ರ ಮನೋಜ್ ಮಿಶ್ರಾ ಅವರು ಮಾನ್ವಿಯ ಪ್ರಸಿದ್ಧ ಸರ್ವೋದಯ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾಗಿದ್ದಾರೆ.



**ಸದ್ಯ ಅನಾರೋಗ್ಯದ ಕಾರಣದಿಂದಾಗಿ ಶಾಮಚರಣ ಮಿಶ್ರಾ ಅವರು ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದಾರೆ. ಅವರು ಪತ್ರಿಕಾ ವಿತರಣಾ ಕ್ಷೇತ್ರಕ್ಕೆ ನೀಡಿದ ಕೊಡುಗೆ ಸ್ಮರಣೀಯ. ಅವರ ನಿಷ್ಕಪಟ ಸೇವೆ ಮತ್ತು ಸಜ್ಜನಿಕೆ ಎಲ್ಲರಿಗೂ ಮಾದರಿ. ದೇವರು ಅವರಿಗೆ ಉತ್ತಮ ಆರೋಗ್ಯ, ಆಯಸ್ಸು ಮತ್ತು ಸುಖ ಸಂತೋಷ ಕರುಣಿಸಲಿ ಎಂದು ಎಲ್ಲರೂ ಪ್ರಾರ್ಥಿಸುತ್ತೇನೆ.**

**–ಸಾಜಿದ್ ಖಾದ್ರಿ,ಮಾನ್ವಿ**

# ಮಾಜಿ ಸೈನಿಕರ ಸಂಘದ ಕಾರ್ಯಾಲಯ ಉದ್ಘಾಟನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.4**–ರಾಯಚೂರು ಮಹಾನಗರ ಪಾಲಿಕೆಯ ಹಳೆಯ ನಗರಸಭೆಯ ಕಟ್ಟಡದಲ್ಲಿ ಮಾಜಿ ಸೈನಿಕರ ಸಂಘದ ಕಾರ್ಯಾಲಯವನ್ನು ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಸೆಪ್ಟೆಂಬರ್ 4ರಂದು ಉದ್ಘಾಟಿಸಿದರು.

ಈ ವೇಳೆ ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಸಾಜೀದ ಸಮೀರ ಅವರು ಮಾತನಾಡಿ, ಮಾಜಿ ಸೈನಿಕರ ಸಂಘಕ್ಕೆ ನಿಯಮದಡಿಯಲ್ಲಿ ಮಹಾನಗರ ಪಾಲಿಕೆಯ ಸೌಲಭ್ಯಗಳನ್ನು ಒದಗಿಸಲಾಗುವುದು. ನಿಯಮದಡಿ ಅವಕಾಶವಿಲ್ಲದಿದ್ದಲ್ಲಿ ಸರ್ವ ಸದಸ್ಯರ ಸಹಕಾರ ಪಡೆದು ಬೇಡಿಕೆ ಈಡೇರಿಸಲಾಗುವುದು ಎಂದು ತಿಳಿಸಿದರು.

ಈ ವೇಳೆ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಅವರು ಮಾತನಾಡಿ, ಪಾಲಿಕೆಯ ಆಯುಕ್ತರೊಂದಿಗೆ ಚರ್ಚಿಸಿ ಮಾಜಿ ಸೈನಿಕರ ಸಂಘಕ್ಕೆ ಬೇರೆ ಬೇರೆ ಸೌಕರ್ಯ ಒದಗಿಸಲಾಗುವುದು ಎಂದು ತಿಳಿಸಿದರು.




ಇದೇ ಸಂದರ್ಭದಲ್ಲಿ ಜಿಲ್ಲಾ ಎನ್.ಸಿ.ಸಿ ಕಮಾಂಡೆಂಟ್ ಅಧಿಕಾರಿಗಳು, ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷರು ಸೇರಿದಂತೆ ವಿವಿಧ ಪದಾಧಿಕಾರಿಗಳು, ಮಾಜಿ ಸೈನಿಕರ ಕುಟುಂಬದ ಸದಸ್ಯರು ಇದ್ದರು.

# ಅಂಕಲಗಿ ಶ್ರೀಗಳಿಂದ ಆಶೀರ್ವಚನ ಇಂದು ಮುಷ್ಟೂರು ಗ್ರಾಮದ ಶ್ರೀಮಾರುತೇಶ್ವರ ದೇವಸ್ಥಾನದಲ್ಲಿ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಸೆ.4**– ತಾಲೂಕಿನ ಮುಷ್ಟೂರು ಗ್ರಾಮದ ಆರಾಧ್ಯದೈವ ಶ್ರೀಮಾರುತೇಶ್ವರ ದೇವಸ್ಥಾನದಲ್ಲಿ ಶ್ರೀಮಾರುತೇಶ್ವರ ಸೇವಾ ಸಮಿತಿ ಪ್ರತಿಷ್ಠಾಪಿಸಿದ ಶ್ರೀಗಣೇಶ ಮೂರ್ತಿ ವಿಸರ್ಜನೆ ಕಾರ್ಯಕ್ರಮ ಹಿನ್ನೆಲೆಯಲ್ಲಿ ಸೆ.5ರಂದು ಅಂಕಲಗಿ ಶ್ರೀಅಡವಿ ಸಿದ್ದೇಶ್ವರ ಸಂಸ್ಥಾನಮಠದ ಶ್ರೀಅಮರ ಸಿದ್ದೇಶ್ವರ ಸ್ವಾಮೀಜಿಗಳ ಆಶೀರ್ವಚನ ಕಾರ್ಯಕ್ರಮ ಜರುಗಲಿದೆ.

ಗ್ರಾಮದ ಶ್ರೀಮಾರುತೇಶ್ವರ ಸೇವಾ ಸಮಿತಿ 35ವರ್ಷಗಳಿಂದ ವರಸಿದ್ಧಿ ವಿನಾಯಕ ಪ್ರತಿಷ್ಠಾಪನೆ ಮಾಡುತ್ತಾ, ಅನ್ನಸಂತರ್ಪಣೆ ನಡೆಸುತ್ತಿದೆ. ಈ ವರ್ಷದ ಗಣೇಶ ವಿಸರ್ಜನೆ ಕಾರ್ಯಕ್ರಮ ಹಿನ್ನೆಲೆಯಲ್ಲಿ ಶ್ರೀಮ.ನಿ.ಪ್ರ.ಡಾ.ಅಮರಸಿದ್ಧೇಶ್ವರ್ ಮಹಾಸ್ವಾಮಿಗಳ ಆಶೀರ್ವಚನ ಕಾರ್ಯಕ್ರಮ ಸಂಜೆ 4ಗಂಟೆಗೆ ಜರುಗಲಿದೆ. ನಂತರ ಶ್ರೀಗಳಿಗೆ ಅಭಿನಂದನೆ ಕಾರ್ಯಕ್ರಮ ಜರುಗಲಿದೆ.



ಬಳಿಕ ಗಣೇಶ ವಿಸರ್ಜನೆ ಜರುಗಲಿದೆ. ಸುತ್ತಮುತ್ತಲಿನ ಗ್ರಾಮಗಳ ಭಕ್ತ ರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ದೇವಸ್ಥಾನ ಸಮಿತಿ ಕೋರಿದೆ.

# ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ: ಕಬ್ಬಡಿಯಲ್ಲಿ ವಿಭಾಗಿಯ ಮಟ್ಟಕ್ಕೆ ಆಯ್ಕೆಯಾದ ಮಾನ್ವಿ ತಂಡ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.4**– ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರಾಯಚೂರು, ಕರ್ನಾಟಕ ಕ್ರೀಡಾ ಪ್ರಾಧಿಕಾರ ಬೆಂಗಳೂರು ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರಾಯಚೂರು ಸಹಯೋಗದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾ ಕೂಟದಲ್ಲಿ ಮಾನ್ವಿ ತಾಲೂಕಿನ ಕ್ರೇಜಿ ಸಾವಿತ್ರೀ ಬಾಯ್ಸ್ ಕಬಡ್ಡಿ ತಂಡ ಪ್ರಥಮ ಸ್ಥಾನ ಪಡೆದು ಕಬ್ಬಡಿಯಲ್ಲಿ ವಿಭಾಗೀಯ ಮಟ್ಟಕ್ಕೆ ಆಯ್ಕೆಯಾಗಿ ಸಾಧನೆ ಮಾಡಿದೆ.

ಇತ್ತೀಚೆಗೆ ರಾಯಚೂರು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಮಾನ್ವಿ ತಾಲೂಕಿನಿಂದ ಭಾಗವಹಿಸಿದ್ದ ಮಾನ್ವಿ ಕ್ರೇಜಿ ಸಾವಿತ್ರೀ ಬಾಯ್ಸ್ ಕಬಡ್ಡಿ ತಂಡ ಪ್ರಥಮ ಸ್ಥಾನ ಪಡೆದುಕೊಂಡು ವಿಭಾಗೀಯ ಮಟ್ಟಕ್ಕೆ ಆಯ್ಕೆಯಾಗಿ ಟ್ರೋಫಿ ಪಡೆದುಕೊಂಡಿದ್ದಾರೆ. ಈ ಬಗ್ಗೆ ತಂಡದ ವ್ಯವಸ್ಥಾಪಕರಾದ ಬಸವನಗೌಡ.ವಿ ಆಲ್ದಾಳ ಅವರು ಹರ್ಷ ವ್ಯಕ್ತಪಡಿಸುವ ಮೂಲಕ ಕ್ರೇಜಿ ಸಾವಿತ್ರೀ ಬಾಯ್ಸ್ ಕಬಡ್ಡಿ ತಂಡವು ಈ ಬಾರಿ ವಿಭಾಗೀಯ ಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಕ್ರೀಡೆಯಲ್ಲಿ ವಿಶೇಷ ಸಾಧನೆ ಮಾಡಿ ಮಾನ್ವಿ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ವಿಭಾಗೀಯ ಮಟ್ಟದಲ್ಲಿ ಕೂಡ




ಉತ್ತಮ ಪ್ರದರ್ಶನ ನೀಡಲಿ ಎಂದು ಶುಭ ಹಾರೈಸಿ ತಂಡದ ಕ್ರೀಡಾ ಪಟುಗಳಿಗೆ ಅಭಿನಂದಿಸಿದರು.

ಕಬ್ಬಡಿ ತಂಡ ನಾಯಕ ರಮೇಶ್ ಕಪಗಲ್, ಉಪನಾಯಕ ವೀರೇಶ್ ಚಿಕಲಪರ್ವಿ ಹಾಗೂ ಕ್ರೀಡಾ ಪಟುಗಳಾದ ಅಶೋಕ್ ಹರವಿ, ಸೊಹೈಲ್ ನೀರಮಾನ್ವಿ, ,ಬಸವ ಬಲ್ಲಟಗಿ, ಶಿವು ಕೋನಾಪುರಪೇಟೆ, ಚಂದ್ರು ಆರ್.ಜಿಕ್ಯಾಂಪ್, ಚಂದ್ರು ಕವಿತಾಳ, ರಾಕೇಶ್ ಕಪಗಲ್, ಹನುಮೇಶ ಆರೋಲಿ, ಮೈಮುದ್ ಕಪಗಲ್ ಉಪಸ್ಥಿತರಿದ್ದರು.

# ವಿವಿಧ ತಾಲ್ಲೂಕಿನಲ್ಲಿ ಜೆಸ್ಕಾಂ ಗ್ರಾಹಕರ ಕುಂದುಕೊರೆತೆ ತ್ರೈಮಾಸಿಕ ಸಭೆ

**ರಾಯಚೂರು,ಸೆ.4**– ಜಿಲ್ಲೆಯ ವಿವಿಧ ತಾಲ್ಲೂಕಿನ ಜೆಸ್ಕಾಂ ಉಪ ವಿಭಾಗಗಳಲ್ಲಿ ಗ್ರಾಹಕರ ಕುಂದುಕೊರೆತೆ ತ್ರೈಮಾಸಿಕ ಸಭೆಯನ್ನು ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ವಿವಿಧ ದಿನಾಂಕಗಳಂದು ಹಮ್ಮಿಕೊಳ್ಳಲಾಗಿದ್ದು, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ.

ಸೆಪ್ಟೆಂಬರ್ 18ರಂದು ಜಿಲ್ಲೆಯ ಸಿಂಧನೂರು, ಸೆಪ್ಟೆಂಬರ್ 24ರಂದು ರಾಯಚೂರು ನಗರ ಉಪ ವಿಭಾಗ-1 ಹಾಗೂ ನಗರ ಉಪ ವಿಭಾಗ-2, ಸೆಪ್ಟೆಂಬರ್ 12ರಂದು ಮಸ್ಕಿ ಹಾಗೂ ಲಿಂಗಸುಗೂರು, ಸೆಪ್ಟೆಂಬರ್ 06ರಂದು ರಾಯಚೂರು ಗ್ರಾಮೀಣ ಉಪ ವಿಭಾಗ, ಸೆಪ್ಟೆಂಬರ್ 26ರಂದು ಶಕ್ತಿನಗರ, ಸೆಪ್ಟೆಂಬರ್ 25ರಂದು ಮಾನ್ವಿ, ಸೆಪ್ಟೆಂಬರ್ 09ರಂದು ದೇವದುರ್ಗ ಹಾಗೂ ಸಿರವಾರದಲ್ಲಿ ನಡೆಯುವ ಗ್ರಾಹಕರ ಕುಂದುಕೊರತೆ ತ್ರೈಮಾಸಿಕ ಸಭೆಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗಿಯಾಗುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹ ಸಹಾಯಧನಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಸೆ.4**– ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕ ಸಂಖ್ಯೆ: 222 ರಲ್ಲಿ ಘೋಷಿಸಿರುವಂತೆ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50 ಸಾವಿರ ರೂ.ಗಳ ಸಹಾಯಧನ ನೀಡುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದವರ ಸರಳ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 50 ಸಾವಿರ ರೂಪಾಯಿಗಳು ನೀಡುವ ಕಾರ್ಯಕ್ರಮವನ್ನು ಷರತ್ತಿಗೊಳಪಟ್ಟು ಅನುಷ್ಠಾನಗೊಳಿಸಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

ಷರತ್ತುಗಳು: ಅರ್ಜಿ ಸಲ್ಲಿಸುವ ವಧು-ವರರು ಕರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದವರಾಗಿರಬೇಕು. ಸಾಮೂಹಿಕ ವಿವಾಹಗಳಲ್ಲಿ ಕನಿಷ್ಠ 10 ಜೋಡಿಗಳು ಭಾಗವಹಿಸಿರತಕ್ಕದ್ದು. ಜಿಲ್ಲಾ ನೋಂದಣಿ/ ವಕ್ಫ್ ಬೋರ್ಡ್ ಕಚೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟಳು, ದೇವಸ್ಥಾನದ ಟ್ರಸ್ಟಳು, ಸಂಘಗಳು, ಸೊಸೈಟಿಗಳು ವಕ್ಫಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45 ವರ್ಷ ವಯಸ್ಸು ಆಗಿರತಕ್ಕದ್ದು. ಈ ಯೋಜನೆಯಡಿ ಸಹಾಯಧನ ಪಡೆಯಲು ವಧು-ವರರ ವಾರ್ಷಿಕ ಆದಾಯವು 2.50 ಲಕ್ಷ ರೂ.ಗಳು ಮತ್ತು ಒಟ್ಟಾರೆಯಾಗಿ 5 ರೂ. ಲಕ್ಷಗಳನ್ನು ಮೀರತಕ್ಕದ್ದಲ್ಲ. ಈ ಸೌಲಭ್ಯವನ್ನು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡತಕ್ಕದ್ದು. ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ. ಈ ಸಾಮೂಹಿಕ ವಿವಾಹವು ಇತರೆ ಜಿಲ್ಲೆಗಳಲ್ಲಿ ನಡೆದಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆರವರು ದೃಢೀಕರಿಸುವುದು. ವಧು-ವರರು ಕನಿಷ್ಠ ಎಳು ದಿನ ಮುಂಚಿತವಾಗಿ ವಾಸ್ತವ್ಯವಿರುವ ಜಿಲ್ಲೆಯಲ್ಲಿಯೇ ಅರ್ಜಿ ಸಲ್ಲಿಸತಕ್ಕದ್ದು.

ಸಾಮೂಹಿಕ ವಿವಾಹ ಕಾರ್ಯಕ್ರಮದ ಪೋಟೊ ಹಾಗೂ ವಧು-ವರನ ಜಂಟಿ ಭಾವಚಿತ್ರಗಳನ್ನು(ಜಿ.ಪಿ.ಎಸ್) ಸ್ಥಿರ ಚಿತ್ರಗಳನ್ನು ಸಲ್ಲಿಸುವುದು. ಅರ್ಹ ವಧು-ವರರಿಗೆ ಮಂಜೂರಾದ ಪ್ರೋತ್ಸಾಹಧನವನ್ನು ವಧು ಮತ್ತು ವರನ ಹೆಸರಿನಲ್ಲಿರುವ ಜಂಟಿ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು. ಯಾವುದೇ ತರಹದ ಬಾಲ್ಯವಿವಾಹ ಅಥವಾ ಅಪ್ರಾಪ್ತ ವಯಸ್ಸಿನ ವಿವಾಹಗಳು ಜರುಗದಿರುವಂತೆ ಖಾತ್ರಿಪಡಿಸಿಕೊಳ್ಳುವ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿ (ಸಿ.ಡಿ.ಪಿ,ಒ) ರವರು ಈ ಪ್ರಕ್ರಿಯೆಯ ಭಾಗವನ್ನಾಗಿಸತಕ್ಕದ್ದು. ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರುಗಳಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು-ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 5000 ರೂ.ಗಳನ್ನು ನೀಡುವುದು. ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರು ಈ ಕಾರ್ಯಕ್ರಮದ ಏಳು ದಿನ ಮುಂಚಿತವಾಗಿ ಕಾರ್ಯಕ್ರಮ ಆಯೋಜನೆಯ ಬಗ್ಗೆ ಅರ್ಜಿ ಸಲ್ಲಿಸುವುದು ಮತ್ತು ವಿವಾಹ ನಡೆದ ದಿನಾಂಕದಿಂದ 3 ದಿನಗಳೊಳಗಾಗಿ ಅಗತ್ಯ ದಾಖಲಾತಿಗಳನ್ನು ಸಂಬಂಧಪಟ್ಟ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವುದು. ಪ್ರೋತ್ಸಾಹ ಧನ ಪಡೆಯಲು ಮದುವೆ ದಿನಾಂಕದ 03 ತಿಂಗಳ ಒಳಗಾಗಿ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಇವರ ಕಚೇರಿಗೆ ನಿಗಧಿತ ನಮೂನೆಯಲ್ಲಿ ಮದುವೆ ಪ್ರಮಾಣ ಪತ್ರ ಮತ್ತು ಇತರೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮಾಹಿತಿ ಕೇಂದ್ರ ರಾಯಚೂರು: 9731028420, ದೇವದುರ್ಗ: 9148233616, ಲಿಂಗಸುಗೂರು: 9886447863, ಮಾನವಿ: 887334758 ಹಾಗೂ ಸಿಂಧನೂರು: 8217621732ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H**